MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 04 | ಸಂಚಿಕೆ: 302 | ಗುರುವಾರ : 18-09-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 302 | THURSDAY : 18-09-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಬೆಳೆಸಾಲ ಮನ್ನಾ ಬೇಡಿಕೆ ಕುರಿತು ಪರಿಶೀಲನೆ : ಸಿಎಂ ಸಿದ್ದರಾಮಯ್ಯ



**ಕಲಬುರಗಿ,ಸೆ.17–** ಭಾರೀ ಮಳೆಯಿಂದಾಗಿ ಬೆಳೆ ನಷ್ಟ ಸಂಭವಿಸಿದ್ದು ರೈತರ ಅನುಕೂಲಕ್ಕಾಗಿ ಬೆಳೆ ಸಾಲ ಮನ್ನಾ ಮಾಡಬೇಕೆಂಬ ಬೇಡಿಕೆಯನ್ನು ಪರಿಶೀಲಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ರಾಜ್ಯದಲ್ಲಿ ಅತಿವೃಷ್ಟಿಯಿಂದಾಗಿ ಸಂಭವಿಸಿರುವ ಬೆಳೆಹಾನಿಯನ್ನು ಕಂದಾಯ ಮತ್ತು ಕೃಷಿ ಇಲಾಖೆಯ ಅಧಿಕಾರಿಗಳಿಂದ ಜಂಟಿ ಸಮೀಕ್ಷೆನಡೆಸಲು ಆದೇಶಿಸಲಾಗಿದೆ. ವಾರದಲ್ಲಿ ಈ ಸಮೀಕ್ಷೆ ಪೂರ್ಣಗೊಂಡು ವರದಿ ಸಲ್ಲಿಕೆಯಾಗಲಿದೆ. ಆ ಬಳಿಕ ಬೆಳೆನಷ್ಟ ಪರಿಹಾರ ಪಾವತಿಸುವುದಾಗಿ ಹೇಳಿದರು.

ಈ ಬಾರಿ ಅದೃಷ್ಟವಶಾತ್ ರಾಜ್ಯದ ಹಲವು ಕಡೆ ವಾಡಿಕೆಗಿಂತ ಶೇ. 4ರಷ್ಟು ಹೆಚ್ಚು ಮಳೆಯಾಗಿದೆ. ಬೀದರ್, ಕಲಬುರಗಿ, ಯಾದಗಿರಿ ಸೇರಿ ಹಲವಾರು ಜಿಲ್ಲೆಗಳಲ್ಲಿ ಬೆಳೆನಷ್ಟ ಹೆಚ್ಚಾಗಿದೆ. ಕೂಡಲೇ ಪರಿಹಾರ ಪಾವತಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.ಬೆಳೆ ನಷ್ಟದ ಬಗ್ಗೆ ಮಧ್ಯಂತರ ವರದಿ ಪಡೆದಿಲ್ಲ. ಜಂಟಿ ಸಮೀಕ್ಷೆಯ ಅಂತಿಮ ವರದಿ ಪಡೆದು, ಬಳಿಕ ಕ್ರಮ ಕೈಗೊಳ್ಳಲಾಗುವುದು. 2024–25ನೇ ಸಾಲಿಗೆ ಬೆಳೆವಿಮೆ ಯೋಜನೆಯಡಿ 656 ಕೋಟಿ ರೂ. ಪರಿಹಾರ ಪಾವತಿಸಲಾಗಿದೆ. ಇದು ಎಲ್ಲಾ ರಾಜ್ಯಗಳಿಗಿಂತಲೂ ಹೆಚ್ಚಿನ ಮೊತ್ತವಾಗಿದೆ. ಬೆಳೆ ವಿಮೆ ಯೋಜನೆಯನ್ನು ಹೊಂದಿಲ್ಲದವರಿಗೂ ಪರಿಹಾರ ಪಾವತಿಯ ಬಗ್ಗೆ ಪರಿಶೀಲಿಸುವುದಾಗಿ ಹೇಳಿದರು.ಈ ಹಿಂದೆ ಕೇಂದ್ರ ಸರ್ಕಾರ ನಮಗೆ ಬರ ಪರಿಹಾರದ ಹಣ ನೀಡಲಿಲ್ಲ. ಸುಪ್ರಿಂ ಕೋರ್ಟ್‌ಗೆ ಹೋಗಿ ಹೋರಾಟದ ಮೂಲಕ ನಾವು ಪರಿಹಾರ ಪಡೆದುಕೊಂಡಿದ್ದೆವು ಎಂದರು.

ಎನ್‌ಡಿಆರ್‌ಎಫ್ ನಿಯಮಾವಳಿಗಳನ್ನು ಬದಲಾವಣೆ ಮಾಡಿ ಪ್ರಕೃತಿ ವಿಕೋಪ ನಷ್ಟ ಪರಿಹಾರವನ್ನು **(2ನೇ ಪುಟಕ್ಕೆ)**

## ಶಿಕ್ಷಣ, ಆರೋಗ್ಯ, ನೈರ್ಮಲ್ಯಕ್ಕೆ ಹೆಚ್ಚಿನ ಒತ್ತು ಕೊಡೋಣ: ಈಶ್ವರ್ ಕುಮಾರ



ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.17–**ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯ ಪ್ರಯುಕ್ತ ನಗರದ ಜಿಲ್ಲಾ ಪಂಚಾಯತ್ ಆಡಳಿತ ಭವನದಲ್ಲಿ ಸೆ.17ರಂದು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ ಕಾಂದೂ ಅವರು ಧ್ವಜಾರೋಹಣ ನೆರವೇರಿಸಿದರು.

ನಂತರ ಮಾತನಾಡಿದ ಸಿಇಓ ಅವರು, ದೇಶಕ್ಕೆ ಸ್ವಾತಂತ್ರ್ಯ ಸಿಕ್ಕರು ಕೂಡ ನಮ್ಮ ಕಲ್ಯಾಣ ಕರ್ನಾಟಕ ಭಾಗಕ್ಕೆ ಸ್ವಾತಂತ್ರ್ಯ ಭಾಗ್ಯ ಲಭಿಸಲಿಲ್ಲ. ಆ ಸಂದರ್ಭದಲ್ಲಿ ಉಕ್ಕಿನ ಮನುಷ್ಯ ಎಂದೆ ಹೆಸರಾಗಿದ್ದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಪೋಲೊ ಆಪರೇಷನ್ ಮೂಲಕ ಹೈದರಾಬಾದ್ ನಿಜಾಮನನ್ನು ಸೋಲಿಸಿ, ನಿಜಾಮನ ಸಂಸ್ಥಾನವನ್ನು 17ನೇ ಸೆಪ್ಟೆಂಬರ್ 1948 ರಂದು ಭಾರತ ಒಕ್ಕೂಟಕ್ಕೆ ಸೇರಿಸಲಾಯಿತು. ಈ ಬಹುದೊಡ್ಡ ಕೀರ್ತಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರಿಗೆ ಸಲ್ಲುತ್ತದೆ ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕವು ಹಿಂದುಳಿದ ಕಾರಣ 371ಜೆ ಅನ್ವಯ ವಿಶೇಷ ಸ್ಥಾನಮಾನ ನೀಡಲಾಗಿದ್ದು, ಶಿಕ್ಷಣ, ಆರೋಗ್ಯದ ಜೊತೆಗೆ ಅಭಿವೃದ್ಧಿ ಕಾರ್ಯಗಳಿಗೆ**(2ನೇಪುಟಕ್ಕೆ)**

## ಕಾಯಕ ಸಂದೇಶ ಅರಿತು ಸಾಗೋಣ: ಜುಬಿನ್ ಮೊಹಪಾತ್ರ



ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.17–**ರಾಯಚೂರು ಮಹಾನಗರ ಪಾಲಿಕೆ ಕಚೇರಿಯಲ್ಲಿ ನಗರಸಭೆ ಅಧ್ಯಕ್ಷೆ ನರಸಮ್ಮ ನರಸಿಂಹಲು ಮಾಡಿಗಿರಿ ಹಾಗೂ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಕಲ್ಯಾಣ ಕರ್ನಾಟಕ ಉತ್ಸವ ದಿನದ ಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಮಾತನಾಡಿ, ನಿಜಾಂ ಆಳ್ವಿಕೆಯ ಹೈದರಾಬಾದ್ ಪ್ರಾಂತ್ಯವು ಅಖಂಡ ಭಾರತ ಒಕ್ಕೂಟಕ್ಕೆ ಸೇರಲು ಒಪ್ಪದೇ ಇರುವಾಗ ಸೇನಾ ಕಾರ್ಯಾಚರಣೆ ನಡೆದು ಬಳಿಕ ಕಲ್ಯಾಣ ಕರ್ನಾಟಕ ಭಾಗವು ಸೆ.17ರಂದು ಸ್ವಾತಂತ್ರ್ಯಗೊಂಡಿತು. ಈ ದಿಶೆಯಲ್ಲಿ ಮಹನೀಯರಾದ ಸರ್ದಾರ್ ವಲ್ಲಭಬಾಯ್ ಪಟೇಲ್ ಅವರು ಸೇರಿದಂತೆ ಅನೇಕ ಮಹನಿಯರ ಶ್ರಮ ಸ್ಮರಣೀಯವಾಗಿದೆ ಎಂದರು.

ಕಲ್ಯಾಣ ಕರ್ನಾಟಕ ಭಾಗವು ಜಗಜ್ಯೋತಿ ಬಸವಾದಿ ಶರಣರ ಕ್ರಾಂತಿಯ ನೆಲವಾಗಿದೆ. ಅವರು ನೀಡಿದ ಕಾಯಕ ಸಂದೇಶವನ್ನು ಅರಿತು, ನಿಸ್ವಾರ್ಥದಿಂದ ಮತ್ತು ಪ್ರಾಮಾಣಿಕವಾಗಿ ಸಮಾಜದ ಒಳಿತಿಗೆ ನಾವೆಲ್ಲರು ಒಗ್ಗೂಡಿ ಕೆಲಸ ಮಾಡೋಣ ಎಂದು ತಿಳಿಸಿದರು.

## ಸೆ.20ರಂದು ಪ್ರವಾದಿ ಮುಹಮ್ಮದ್ ಅವರ ಜನ್ಮದಿನಾಚರಣೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.17–** ಪ್ರವಾದಿ ಮುಹಮ್ಮದ್ (ಸ.ಅ) ಅವರ 1500 ನೇ ಜನ್ಮದಿನಾಚರಣೆಯು ಇಸ್ಲಾಮಿಕ್ ಸಮಿತಿಯ (ರಿ) ವತಿಯಿಂದ ಇದೇ ತಿಂಗಳ 20ರಂದು ನಗರದ ಕರಡಿಗುಡ್ಡ ಸರ್ಕಲ್‌ನಲ್ಲಿರುವ ಈದ್ಗಾ ಶಾದಿ ಮಹಲ್‌ನಲ್ಲಿ ನಡೆಯಲಿದೆ. 'ಜಾಲ್ಸ–ಎ–ಸೀರತ್–ಎ–ಖಾತಿಮೂನ್ ನಬೀಯ್ಯಿನ್ ಮುಹಮ್ಮದ್ ಮುಸ್ತಫಾ (ಸ.ಅ)' ಎಂಬ ಹೆಸರಿನ ಈ ಕಾರ್ಯಕ್ರಮವು ಸಂಜೆ 7 ಗಂಟೆಗೆ ಪ್ರಾರಂಭವಾಗಲಿದೆ ಎಂದು ಸಮಿತಿಯ ಅಧ್ಯಕ್ಷರಾದ ಸಾಬೆರ್ ಪಾಶ ತಿಳಿಸಿದರು.

ಪಟ್ಟಣದ ಹೊರವಲಯದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸೈಯದ್ ಮುಸ್ತಫಾ ಮಿಯಾ ಯೂಸುಫಿ ಸಾಹಬ್ ವಹಿಸಲಿದ್ದಾರೆ. ಹೈದರಾಬಾದಿನಿಂದ ಆಗಮಿಸುತ್ತಿರುವ ಆಲ್ ಇಂಡಿಯಾ ಮುಸ್ಲಿಂ ಪರ್ಸನಲ್ ಲಾ ಬೋರ್ಡ್ ಸದಸ್ಯ ಸೈಯದ್ ಮಸೂದ್ ಹುಸೇನ್ ಮುಜುತಾಹಿದಿ ಸಾಹಬ್, ಮಹಾರಾಷ್ಟ್ರದಿಂ ದ ಸೈಯದ್ ನೂರ್ ಮೊಹಮ್ಮದ್ ತಹಸೀನ್ ಕುಂದುಮೀರಿ ಸಾಹಬ್ ಮತ್ತು ಸೈಯದ್ ನುಸ್ರತ್ ತನ್ವೀರ್ ಮಿಯಾ ಸಾಹಬ್ ಮುಖ್ಯ ಅತಿಥಿಗಳಾಗಿ ಭಾಗವಹಿ ಸಲಿದ್ದಾರೆ.

ಹಜರತ್ ಸೈಯದ್ ಶಾ ಸಜ್ಜದ್ ಹುಸೇನಿ ಮತವಾಲೆ ಸಾಹೇಬ್ ಮಾನ್ವಿ, ಮೌಲಾನಾ ಮೊಹಮ್ಮದ್ ಸಿಕಂದರ್ ಖಾಸ್ಮಿ ಮಾನ್ವಿ, ಜಮಾತೆ ಇಸ್ಲಾಂ ಹಿಂದ್ ಅಧ್ಯಕ್ಷರಾದ ಅಬ್ದುಲ್ ರೆಹಮಾನ್ ಸಾಬ್, ಹಾಗೂ ನಗರದ ವಿವಿಧ ಸಮಾಜದ ಹಿರಿಯರು ಮತ್ತು ಗಣ್ಯ ವ್ಯಕ್ತಿಗಳು ವಿಶೇಷ ಅತಿಥಿಗಳಾಗಿ ಕಾರ್ಯಕ್ರಮಕ್ಕೆ ಆಗಮಿಸಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಮೆಹದವಿ ಸಮುದಾಯದ ಉತ್ತಮ**(2ನೇಪುಟಕ್ಕೆ)**

## 371(ಜೆ) ಕಾಯಿದೆಯು ಕಲ್ಯಾಣ ಕರ್ನಾಟಕ ಭಾಗದ ಜನತೆಗೆ ಶ್ರೀರಕ್ಷೆ: ಡಾ.ಶರಣಪ್ರಕಾಶ್ ಪಾಟೀಲ

ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.17–** ಜಿಲ್ಲಾಡಳಿತದಿಂದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ–2025ರ ರಾಷ್ಟ್ರ ಧ್ವಜಾರೋಹಣ ಕಾರ್ಯಕ್ರಮವು ಗರದ ಮಹಾತ್ಮಾ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಿತು.



ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ 371(ಜೆ) ಸ್ಥಾನಮಾನ ಸಿಕ್ಕ ಬಳಿಕ ಈ ಭಾಗದ ಮಕ್ಕಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ವಿಶೇಷ ಮೀಸಲು ದೊರೆಯಲು ಸಾಧ್ಯವಾಗಿದೆ. ವೃತ್ತಿಪರ ಕೋರ್ಸ್‌ಗಳಲ್ಲಿ ಮೀಸಲು ದೊರೆತು ಸಾವಿರಾರು ಸಂಖ್ಯೆಯಲ್ಲಿ ಮಕ್ಕಳು ಡಾಕ್ಟರ್, ಎಂಜಿನಿಯರ್ ಆಗಲು ಸಾಧ್ಯವಾಗಿದೆ. ಕಳೆದ 10 ವರ್ಷದಲ್ಲಿ 80 ಸಾವಿರ ಸರ್ಕಾರಿ ನೌಕರಿಗಿಟ್ಟಿಸಲಾಗಿದೆ. ಈ ಭಾಗಕ್ಕೆ 18,000 ಕೋಟಿ ರೂ. ಮಂಜೂರಾಗಿ 371 ಜೆ ಕಾನೂನಿನಿಂದ ಪ್ರತಿ ಮಗುವಿಗು ಸಹಾಯವಾಗಿದ್ದು, ಈ ಭಾಗದ ಜನರಿಗೆ ಕಾಯಕಲ್ಪ, ಕಾಮಧೇನುವಾಗಿ ಶ್ರೀರಕ್ಷೆಯಾಗಿದೆ. ಸಂವಿಧಾನ ಇರುವವರೆಗೆ 371(ಜೆ) ಕಾಯಿದೆ ಇರಲಿದೆ ಎಂದು ತಿಳಿಸಿದರು.

ಅಖಂಡ ಭಾರತ ನಿರ್ಮಾಣದ ಪ್ರಯತ್ನ, ಹೋರಾಟಗಾಥೆ ಸಾಮಾನ್ಯವಾದ ಸಂಗತಿಯಲ್ಲ. ಅಹಿಂಸಾ ಮಾರ್ಗದಲ್ಲಿ ಪ್ರೀತಿಯಿಂದ ದೇಶಕ್ಕೆ ಸ್ವಾತಂತ್ರ್ಯ ಲಭಿಸಿದ್ದು ಇಡೀ ಜಗತ್ತಿಗೆ ಮಾದರಿಯಾಗಿದೆ. ಸಂವಿಧಾನದ ಭದ್ರಬುನಾದಿಯ ಮೇಲೆ ದೇಶ ನಡೆಯುತ್ತಿದೆ. ಸಾಮಾಜಿಕ ಕಳಕಳಿ ಹೊಂದಿದ ಹಿರಿಯರಾದ ಮಲ್ಲಿಕಾರ್ಜುನ ಖರ್ಗೆ ಅವರಂತಹ ಮಹನಿಯರ ಸತತ ಪ್ರಯತ್ನದಿಂದ 2012ರಲ್ಲಿ ಸಂಸತ್ತನಲ್ಲಿ ಪಾಸಾಗಿ 371(ಜೆ) ಕಾಯಿದೆಯಿಂದಾಗಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಭಿವೃದ್ಧಿಯ ಹೊಸ ಪರ್ವ ಆರಂಭವಾಯಿತು ಎಂದು ತಿಳಿಸಿದರು.

ನಮ್ಮ ದೇಶಕ್ಕೆ 1947ರಂದು ಸ್ವಾತಂತ್ರ್ಯ ದೊರೆತರೂ ಕಲ್ಯಾಣ ಕರ್ನಾಟಕ ಭಾಗವು ಸ್ವಾತಂತ್ರ್ಯದಿಂದ ದೂರ ಉಳಿಯಿತು. ಇದಕ್ಕಾಗಿ ಅವಿರತ ಹೋರಾಟ ನಡೆಯಿತು. ಈ ಪ್ರದೇಶವನ್ನು ಭಾರತದ ಒಕ್ಕೂಟದೊಂದಿಗೆ ವಿಲೀನಗೊಳಿಸಲು ಸ್ಥಳೀಯ ಜನರು ನಿಜಾಮರ ದೌರ್ಜನ್ಯದ ವಿರುದ್ಧ ಕೆಚ್ಚೆದೆಯಿಂದ ಹೋರಾಡಿದರು. ನಿಜಾಮರ ಖಾಸಗಿ ಸೇನಾಪಡೆಯಾದ ರಜಾಕರರು ಇಲ್ಲಿನ ಜನರ ಮೇಲೆ ದೌರ್ಜನ್ಯ ಎಸಗಿ, ಹೈದ್ರಾಬಾದನಲ್ಲಿ ಆಗಿನ ನಿಜಾಮರ ಆಡಳಿತವನ್ನು ಸಮರ್ಥಿಸಿಕೊಂಡಿದ್ದರು.

ಇದರಿಂದಾಗಿ, ಭಾರತಕ್ಕೆ ಸ್ವಾತಂತ್ರ್ಯ ಬಂದ ನಂತರವೂ ಹೈದ್ರಾಬಾದ್ ಪ್ರಾಂತ್ಯಕ್ಕೆ ಒಳಪಟ್ಟಿದ್ದ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು ಹಾಗೂ ಕೊಪ್ಪಳ ಜಿಲ್ಲೆಗಳು ಸ್ವತಂತ್ರಗೊಳ್ಳದೇ**(2ನೇಪುಟಕ್ಕೆ)**

## ಉತ್ತಮ ಶಿಕ್ಷಣದಿಂದ ಸದೃಢ ಭಾರತ ನಿರ್ಮಾಣ : ಅಶೋಕ ಹಂಚಲಿ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಸೆ.17–** ಉತ್ತಮ ಶಿಕ್ಷಣದಿಂದ ಸದೃಢ ಭಾರತ ನಿರ್ಮಾಣ ಆಗುತ್ತದೆ. ಉತ್ತಮ ಸಮಾಜದ ನಿರ್ಮಾಣ ಶಿಕ್ಷಕರ ಕೈಯಲ್ಲಿದೆ ಇದೇ ಇದರಿಂದ ಶಿಕ್ಷಕರಿಗೆ ಹೆಚ್ಚಿನ ಸಾಮಾಜಿಕ ಜವಾಬ್ದಾರಿ ಇದೆ ಎಂದು ಚಿಂತಕ ಅಶೋಕ ಹಂಚಲಿ ಹೇಳಿದರು.



ಪಟ್ಟಣದ ಶ್ರೀ ವಿಜಯ ಮಹಾಂತೇಶ್ವರ ಶಾಖಾ ಅನುಭವ ಮಂಟಪದಲ್ಲಿ ಜಿಲ್ಲಾ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟ ತಾಲೂಕ ಘಟಕದಿಂದ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಹಾಗೂ ಉತ್ತಮ ಶಿಕ್ಷಕರಿಗೆ ಪ್ರಶಸ್ತಿಪ್ರದಾನಲ್ಲಿ ಮಾತನಾಡಿದ ಅವರು, ಉತ್ತಮ ಶಿಕ್ಷಕರು ಉತ್ತಮ ಶಿಷ್ಯರನ್ನೂ ರೂಪಿಸಿಸಿದರೆ ಉತ್ತಮ ಶಿಷ್ಯರಿಂದ ಗುರುಗಳಿಗೆ ಗೌರವ ದೊರೆಯುತ್ತದೆ. ಇದನ್ನು ಅರಿತು ಶಿಕ್ಷಕರು ಜವಾಬ್ದಾರಿಯಿಂದ ಕೆಲಸ ಮಾಡಬೇಕೆಂದು ಕರೆ ನೀಡಿದರು.

ಶಿಕ್ಷಣದ ಜೊತೆಗೆ ಗ್ರಾಮೀಣ ಪ್ರದೇಶದ ಜನಪದ ಹಾಗೂ ಸಾಂಸ್ಕೃತಿಕಯನ್ನು ಸಮ್ಮಿಳಿಸಿ ಮಕ್ಕಳಿಗೆ ಬೋಧನೆ ಮಾಡಬೇಕು ಅಲ್ಲದೇ ಆಯಾ ಕಾಲಕ್ಕೆ ತಕ್ಕಂತೆ ಶಿಕ್ಷಕರು ಬದಲಾಗಬೇಕೆಂದರು. ಶಿಕ್ಷಕರ ವೃತ್ತಿ ಬಹಳ ಪವಿತ್ರವಾದದು ಇದಕ್ಕೆ ಪಗಾರದ ಹಂಗಿಲ್ಲ ಸದೃಢ ಸಮಾಜದ ನಿರ್ಮಾಣಕ್ಕೆ ಮಕ್ಕಳಿಗೆ ಜ್ಞಾನದ ಜೊತೆಗೆ ಹೃದಯವಂತಿಕೆ ಬೆಳೆಯುವಂತೆ ಬೋಧಿಸಿ ಎಂದು ಕಿವಿ ಮಾತು ಹೇಳಿದರು.

ನಂತರ ವಿಧಾನ ಪರಷತ್ ಸದಸ್ಯ ಶರಣಗೌಡಪಾಟೀಲ್‌ಬಯ್ಯಾಪು**(2ನೇಪುಟಕ್ಕೆ)**

## ಕಲ್ಯಾಣ ಕರ್ನಾಟಕಕ್ಕೆ ಪಟೇಲ್‌ರ ಕೊಡುಗೆ ಅಪಾರ : ಸಹಾಯಕ ಆಯುಕ್ತ ಬಸವಣೆಪ್ಪ ಕಲಶೆಟ್ಟಿ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಸೆ.17–**ದೇಶದ ಹೈದ್ರಬಾದ್ ನಿಜಮಾರ ಆಳ್ವಿಕೆಗೆ ಒಳಪಟ್ಟಿದ್ದ ಕಲ್ಯಾಣ ಕರ್ನಾಟಕಭಾಗವು ನಿಜಾಮರಿಂದ ವಿಮೋಚನೆ ಹೊಂದಲು ಅಂದಿನ ಗೃಹ ಸಚಿವ ಸರ್ದಾರ್ ವಲ್ಲಬಬಾಯಿ ಪಟೇಲ್ ಪ್ರಮುಖ ಕಾರಣೀಕರ್ತರು ಎಂದು ಸಹಾಯಕ ಆಯುಕ್ತ ಬಸವಣ್ಣಪ್ಪ ಕಲಶೆಟ್ಟಿ ಹೇಳಿದರು.

ಕಲ್ಯಾಣ ಕರ್ನಾಟಕ ಉತ್ಸವ ನಿಮಿತ್ತ ಪಟ್ಟಣದ ತಾಲೂಕ ಕ್ರೀಡಾಂಗಣದಲ್ಲಿ ತಾಲೂಕಆಡಳಿತದ ಹಮ್ಮಿಕೊಂಡಿದ್ದ ಸಾರ್ವಜನಿಕ ಧ್ವಜಾರೋಹಣ ಸಮಾರಂಭದಲ್ಲಿ ಧ್ವಜಾರೋಹಣ ನೇರವೇರಿಸಿ ಮಾತನಾಡಿದ ಅವರು, ದೇಶವು ಬ್ರಿಟಿಷರ ದಾಸ್ಯ ದಿಂದ1947ರಲ್ಲಿ ಬಿಡುಗಡೆಗೊಂಡ ಸ್ವಾತಂತ್ರ ವಾಯಿತು. ಆದರೆ ನಿಜಾಮರ ಆಳ್ವಿಕೆಗೆಒಳಪಟ್ಟಿದ್ದ ಕಲ್ಯಾಣ ಕರ್ನಾಟಕ ಭಾಗಕ್ಕೆ ಸ್ವಾತಂತ್ರ ನೀಡದೇ ನಿಜಾಮ ಕಪಿಮುಷ್ಠಿಯಲ್ಲಿ ಜನರು ನಲುಗಿ ಹೋಗಿದ್ದರು ಈ ವೇಳೆ ಅಂದಿನ ಕೇಂದ್ರದ ಗೃಹ ಸಚಿವ ಸರ್ದಾರ್ ವಲ್ಲಬ ಬಾಯಿ ಪಟೇಲ್‌ರ ಪಾ ತ್ರ ಪ್ರಮುಖವಾಗಿ ಜನರನ್ನು ನಿಜಾಮದ ದಾಸ್ಯದಿಂದ ಮುಕ್ತಿಗೊಳಿಸಿದರು. ಕಕ ಭಾಗವು ರಾಜ್ಯಕ್ಕೆ ಶೇ 50ರಷ್ಟು ಆಹಾರ, ಎಣ್ಣೆ ಕಾಳುಗಳ ಉತ್ಪಾದನೆ ಮಾಡುವ ಪ್ರಮುಖ ಕೃಷಿ ಕಣಜವಾಗಿದೆ. ಅಲ್ಲದೇ ನೈಸರ್ಗಿಕಸಂಪತ್ತು ಹೇರಳವಾಗಿದೆ. ಸ್ಥಳೀಯ ಸಂಪನ್ಮೂಲದ ಜೊತೆಗೆ ಮಾನವ ಸಂಪನ್ಮೂಲದ ಬಳಸಿ ಕೊಂಡು ಕಲ್ಯಾಣ ಕರ್ನಾಟಕ ಭಾಗವ ನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯುವ ಜವಾಬ್ದಾರಿ ಆಡಳಿತದ ಮೇಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷ ಬಾಬುರೆಡ್ಡಿ ಮುನ್ನೂರು, ಗ್ಯಾರಂಟಿ ಯೋಜನೆ ಜಿಲ್ಲಾಧ್ಯಕ್ಷ ಪಾಮಯ್ಯ ಮುರಾರಿ, ನಗರಯೊ ೀಜನಾ ಪ್ರಾಧಿಕಾರ ಅಧ್ಯಕ್ಷ ಭೂಪನಗೌಡ ಕರಡಕಲ್, ಪಿಕರ್ಡ್ ಬ್ಯಾಂಕ್‌ಅಧ್ಯಕ್ಷ ಬಸನಗೌಡ ಮೇಟಿ, ತಹಸೀಲ್ದಾರ ಕುಮಾರಿ ಸತ್ಯಮ್ಮ, ಡಿವೈಎಸ್‌ಪಿದತ್ತಾತ್ರೇಯ ಕರ್ನಾಡ, ಇಓ ಉಮೇಶ, ಎಇಇ ಹನುಮಂತಪ್ಪ, ಬಿಇಓ ಸುಜಾತಹುನೂರು, ಸಿಡಿಪಿಓ ನಾಗರತ್ನ ಇದ್ದರು.

ಯುವ ಮಾರ್ಗ



# ಮೊದಲನೇಯ ಪುಟದಿಂದ

## ಬೆಳೆಸಾಲ ಮನ್ನಾ ಬೇಡಿಕೆ ಕುರಿತು ಪರಿಶೀಲನೆ : ಸಿಎಂ ಸಿದ್ದರಾಮಯ್ಯ

ಹೆಚ್ಚಿಸಬೇಕೆಂದು ಹಲವಾರು ಬಾರಿ ಪ್ರಧಾನಮಂತ್ರಿ ನರೇಂದ್ರಮೋದಿ, ಕೇಂದ್ರ ಹಣಕಾಸು ಸಚಿವರಾದ ನಿರ್ಮಲಾಸೀತಾರಾಮನ್ ಅವರನ್ನು ಭೇಟಿ ಮಾಡಿ ಮನವಿ ಮಾಡಿದ್ದೇನೆ. ಆದರೆ ಕೇಂದ್ರದಿಂದ ಯಾವುದೇ ಸ್ಪಂದನೆ ಸಿಕ್ಕಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

**ದರೋಡೆಕಾರರ ಕಾರು ಪತ್ತೆ:** ವಿಜಯಪುರದಲ್ಲಿ ಎಸ್‌ಬಿಐ ಬ್ಯಾಂಕ್ ದರೋಡೆ ಪ್ರಕರಣದ ಆರೋಪಿಗಳು ಬಳಸಿದ್ದ ಕಾರು ಪತ್ತೆಯಾಗಿದೆ. ಕೂಡಲೇ ಅಪರಾಧಿಗಳನ್ನು ಪತ್ತೆ ಹಚ್ಚಿ ಬಂಧಿಸಬೇಕೆಂದು ವಿಜಯಪುರ ಎಸ್‌ಪಿ ಅವರಿಗೆ ಕರೆ ಮಾಡಿ ಸೂಚನೆ ನೀಡಿದ್ದೇನೆ. ಮುಂದಿನ ದಿನಗಳಲ್ಲಿ ಈ ರೀತಿಯ ಪ್ರಕರಣಗಳು ಮರುಕಳಿಸದಂತೆ ಮುಂಜಾಗ್ರತೆ ವಹಿಸಲು ಅಧಿಕಾರಿಗಳಿಗೆ ಆದೇಶಿಸಿರುವುದಾಗಿಯೂ ಹೇಳಿದರು.ಬ್ಯಾಂಕ್‌ಗಳಿಗೆ ಭದ್ರತಾ ಸಿಬ್ಬಂದಿಗಳನ್ನು ನಿಯೋಜಿಸಿಕೊಳ್ಳುವುದು ಹಾಗೂ ಸೂಕ್ತ ಭದ್ರತಾ ವ್ಯವಸ್ಥೆಗಳನ್ನು ಏರ್ಪಡಿಸುವುದು ಬ್ಯಾಂಕ್‌ಗಳ ಜವಾಬ್ದಾರಿ. ಸರ್ಕಾರ ಪೊಲೀಸರಿಂದ ಅಗತ್ಯ ಭದ್ರತೆಯನ್ನು ಒದಗಿಸುತ್ತದೆ ಎಂದರು.

**ಅರ್ಹರನ್ನು ತೆಗೆಯುವುದಿಲ್ಲ:**ಬಿಪಿಎಲ್ ಪಟ್ಟಿಯಲ್ಲಿರುವ ಅನರ್ಹರನ್ನು ಪರಿಶೀಲಿಸಿ ತೆಗೆದು ಹಾಕಬೇಕು. ಅರ್ಹರಿದ್ದರೆ ಅವರಿಗೆ ಬಿಪಿಎಲ್ ಕಾರ್ಡ್‌ಗಳನ್ನು ಹೊಸದಾಗಿ ನೀಡಬೇಕೆಂದು ಸೂಚನೆ ನೀಡಿದ್ದೇನೆ ಎಂದು ಹೇಳಿದರು.

**ಬಿಜೆಪಿಯವರು ಹೇಳಿದಂತೆ ಕೇಳುವುದಿಲ್ಲ:**ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ವಿಷಯದಲ್ಲಿ ಬಿಜೆಪಿ ನಾಯಕರು ಹಾಗೂ ವಿರೋಧಪಕ್ಷ ನಾಯಕ ಆರ್.ಅಶೋಕ್ ಹೇಳಿದಂತೆಲ್ಲಾ ಕೇಳಲು ಸಾಧ್ಯವಿಲ್ಲ. ಅವರು ರಾಜಕೀಯವಾಗಿ ಟೀಕೆ ಮಾಡುತ್ತಿದ್ದಾರೆ ಎಂದು ಆಕ್ಷೆ?ಪಿಸಿದರು.ರಾಜ್ಯದ ಪ್ರತಿಯೊಬ್ಬರನ್ನು ಸಮೀಕ್ಷೆ ನಡೆಸಿ ಸಾಮಾಜಿಕ ಹಾಗೂ ಶೈಕ್ಷಣಿಕ ಮಾಹಿತಿಯನ್ನು ಕಲೆ ಹಾಕಲಾಗುತ್ತದೆ. ಈ ದತ್ತಾಂಶಗಳನ್ನು ಆಧರಿಸಿ ಮುಂದಿನ ದಿನಗಳಲ್ಲಿ ಅಭಿವೃದ್ಧಿಗೆ ಕಾರ್ಯಕ್ರಮಗಳನ್ನು ರೂಪಿಸಲಾಗುವುದು ಎಂದರು.

ಸಮೀಕ್ಷೆಯಲ್ಲಿ ಕ್ರಿಶ್ಚಿಯನ್ ಧರ್ಮದ ಜೊತೆಗೆ ಜಾತಿಯ ಉಪ ಕಾಲಂಗಳನ್ನು ಸೇರಿಸುವುದಕ್ಕೆ ವಿರೋಧ ವ್ಯಕ್ತಪಡಿಸುವುದು ಅನಗತ್ಯ. ಮುಸ್ಲಿಂ ಮತ್ತು ಕ್ರಿಶ್ಚಿಯನ್ ಸಮುದಾಯದವರು ಈ ದೇಶದ ಪ್ರಜೆಗಳಲ್ಲವೇ? ಎಂದು ಪ್ರಶ್ನಿಸಿದರು.

ಸಮೀಕ್ಷೆಯಲ್ಲಿ ಜನ ನೀಡುವ ಮಾಹಿತಿಯನ್ನು ದಾಖಲಿಸಲಾಗುತ್ತದೆ. ಇದಕ್ಕಾಗಿ 1.75 ಲಕ್ಷ ಶಿಕ್ಷಕರನ್ನು ಸಮೀಕ್ಷೆಗಾಗಿ ನಿಯೋಜಿಸಲಾಗಿದೆ. ಪ್ರತಿಯೊಬ್ಬರಿಗೂ 150 ಮನೆಗಳನ್ನು ಹಂಚಿಕೆ ಮಾಡಲಾಗಿದೆ. ಕಳೆದ ವರ್ಷಕ್ಕಿಂತಲೂ ಈ ಬಾರಿ 40 ಸಾವಿರಕ್ಕೂ ಹೆಚ್ಚು ಶಿಕ್ಷಕರನ್ನು ಸಮೀಕ್ಷೆಗೆ ನಿಯೋಜಿಸಲಾಗಿದೆ ಎಂದು ಹೇಳಿದರು.

ರಾಜ್ಯದ ಪ್ರಸ್ತಾವನೆಯನ್ನು ಕೇಂದ್ರ ಪರಿಶೀಲಿಸಿದ ಬಳಿಕ ಕುರುಬ ಸಮುದಾಯ ಎಸ್‌ಟಿಗೆ ಸೇರಲು ಅವಕಾಶಗಳಿದ್ದರೆ, ಕ್ರಮ ಕೈಗೊಳ್ಳುತ್ತದೆ. ಇಲ್ಲವಾದರೆ ತಿರಸ್ಕರಿಸುತ್ತದೆ. ಈ ವಿಚಾರಕ್ಕೆ ಯಾರೂ ವಿರೋಧ ವ್ಯಕ್ತಪಡಿಸುವ ಅಗತ್ಯವಿಲ್ಲ ಎಂದರು.ಕಲ್ಯಾಣ ಕರ್ನಾಟಕ ಭಾಗಕ್ಕೆ ಪ್ರತ್ಯೇಕ ಸಚಿವಾಲಯ ರಚಿಸಲಾಗಿದೆ. ಅದು ಈ ಭಾಗದಲ್ಲೆ ಇರಲಿದ್ದು, ಅಭಿವೃದ್ಧಿಗೆ ಹೆಚ್ಚಿನ ವೇಗ ದೊರಕಿಸುತ್ತದೆ ಎಂದು ಹೇಳಿದರು.

## ಸೆ.20ರಂದು ಪ್ರವಾದಿ ಮುಹಮ್ಮದ್ ಅವರ ಜನ್ಮದಿನಾಚರಣೆ

ಸಾಧನೆ ಮಾಡಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುತ್ತಿದೆ. ಮಹಿಳೆಯರಿಗಾಗಿ ಪ್ರತ್ಯೇಕ ಆಸನಗಳ ವ್ಯವಸ್ಥೆ ಮಾಡಲಾಗಿದ್ದು, ಎಲ್ಲರೂ ಕಾರ್ಯಕ್ರಮಕ್ಕೆ ಬಂದು ಯಶಸ್ವಿಗೊಳಿಸಬೇಕೆಂದು ಎಂದು ವಿನಂತಿಸಿಕೊಂಡಿದ್ದಾರೆ. ಈ ಸಂದರ್ಭದಲ್ಲಿ ನಿಜಾಮ್ ಪಾಶ ಮಿಯಾ, ನಸೀರ್ ಸೌಕಾರ್, ಜಾಕಿರ್ ಮೋಹಿನುದ್ದಿನ್, ಶಂಶಿರ್ ಖಾನ್, ಮೊಯಿನ್ ಖಾನ್, ಫೈಝುನ್ ಮಿಯಾ, ಅಲೀಮ್ ಪಾಶ, ಹುಸೇನ್ ಪಾಶ ಸಾಬ್, ಅಮ್ಜದ್ ಖಾನ್, ಸುಭಾನ್ ಬೇಗ್, ಅಲ್ಲಾಹ್ ಬಕ್ಷ್, ಅಜಾಮ್ ಸಾಬ್, ಸಾಯೀದ್ ಸಾಬ್, ಮುನ್ನುವರ್ ಮಿಯಾ, ಮುನವಾರ್ ಸಾಬ್ ಮತ್ತು ಸಮೀರ್ ಹಾಗೂ ಮುಂತಾದವರು ಉಪಸ್ಥಿತರಿದ್ದರು.

## 371(ಜೆ) ಕಾಯಿದೆಯು ಕಲ್ಯಾಣ ಕರ್ನಾಟಕ ಭಾಗದ ಜನತೆಗೆ ಶ್ರೀರಕ್ಷೆ: ಡಾ.ಶರಣಪ್ರಕಾಶ್ ಪಾಟೀಲ

13 ತಿಂಗಳ ಕಾಲ ನಿಜಾಮರ ಆಳ್ವಿಕೆಯಲ್ಲಿದ್ದವು. 'ಆಪರೇಷನ್ ಪೋಲೋ' ಎಂಬ ಪೊಲೀಸ್ ಕ್ರಮದ ನಂತರ ಈ ಪ್ರದೇಶವನ್ನು ಸೆಪ್ಟೆಂಬರ್ 17, 1948ರಂದು ನಿಜಾಮರ ಆಳ್ವಿಕೆಯಿಂದ ಮುಕ್ತಗೊಳಿಸಲಾಯಿತು.

ಸೆಪ್ಟೆಂಬರ್ 17, 1948ರಂದು ಆಗಿನ ಗೃಹ ಸಚಿವರಾದ ಸರ್ದಾರ್ ವಲ್ಲಭ ಭಾಯಿ ಪಟೇಲ್ ರವರು ಪ್ರಾರಂಭಿಸಿದ ಮಿಲಿಟರಿ ಕಾರ್ಯಾಚರಣೆಯ ನಂತರ ನಿಜಾಮರ ಆಳ್ವಿಕೆಯಲ್ಲಿದ್ದ ಅಂದಿನ ಹೈದ್ರಾಬಾದ್ ರಾಜ್ಯವನ್ನು ಭಾರತ ಒಕ್ಕೂಟಕ್ಕೆ ಸೇರಿಸಲಾಯಿತು. ಇದರಿಂದ ಹೈದ್ರಾಬಾದ ನಿಜಾಮನ ವಶದಲ್ಲಿದ್ದ ಕರ್ನಾಟಕ ಪ್ರಾಂತದ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಬಳ್ಳಾರಿ ಹಾಗೂ ಕೊಪ್ಪಳ ಜಿಲ್ಲೆಗಳನ್ನು ನಿಜಾಮರ ಆಳ್ವಿಕೆಯಿಂದ ವಿಮುಕ್ತಗೊಳಿಸಲಾಯಿತು. ಹೈದ್ರಾಬಾದನ್ನು ವಿಮೋಚನೆಗಳಿಸಿದ ಹುತಾತ್ಮರನ್ನು ಸ್ಮರಿಸಲು ಮತ್ತು ಯುವಕರಲ್ಲಿ ದೇಶ ಪ್ರೇಮವನ್ನು ತುಂಬಲು ಸೆಪ್ಟೆಂಬರ್ 17ನ್ನು "ಕಲ್ಯಾಣ ಕರ್ನಾಟಕ ಉತ್ಸವ ದಿನ"ವನ್ನಾಗಿ ಆಚರಿಸಲಾಗುತ್ತದೆ ಎಂದು ಅವರು ತಿಳಿಸಿದರು.

ರಾಜ್ಯ ಸರ್ಕಾರವು 371(ಜೆ) ಅನುಷ್ಠಾನಕ್ಕೆ ವಿಶೇಷ ಆದ್ಯತೆ ನೀಡಿದೆ. ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗಾಗಿ ಪ್ರತ್ಯೇಕ ಸಚಿವಾಲಯದ ಮಂಜೂರಾತಿಗೆ ಸಚಿವ ಸಂಪುಟ ಸಭೆಯಲ್ಲಿ ನಿರ್ಣಯಿಸಲಾಗಿದೆ. 371 (ಜೆ) ಕಾಯಿದೆಯಿಂದಾಗಿ ಈ ಭಾಗದ ಮಕ್ಕಳಿಗೆ ಉತ್ತಮ ಭವಿಷ್ಯವಿದೆ ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ರಾಜ್ಯ ಸರ್ಕಾರವು ಬದ್ಧವಾಗಿದೆ. ರಾಯಚೂರ ಜಿಲ್ಲೆಯಲ್ಲಿ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣ ಮಾಡಲಾಗುತ್ತಿದೆ. ವಿಮಾನ ನಿಲ್ದಾಣ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ.

ಅಭಿವೃದ್ಧಿಯ ವಿಷಯದಲ್ಲಿ ಪಕ್ಷಬೇಧ ಮರೆತು ಎಲ್ಲರೂ ಸೇರಿ ಕಾರ್ಯ ಪ್ರವೃತ್ತರಾಗಬೇಕಿದೆ. ಅಧಿಕಾರಿಗಳು ಮತ್ತು ಸಿಬ್ಬಂದಿ ದಕ್ಷತೆಯಿಂದ ಕೆಲಸ ಮಾಡಬೇಕು. ರಾಯಚೂರ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಎಲ್ಲರೂ ಕಂಕಣಬದ್ಧರಾಗಿ ದುಡಿಯೋಣ ಎಂದು ಸಚಿವರು ಸಲಹೆ ಮಾಡಿದರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸಿದ್ದರು.

ಸಮಾರಂಭದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು, ಮಹರ್ಷಿ ವಾಲ್ಮೀಕಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ, 2ನೇ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ತಹಸೀಲ್ದಾರ ಸುರೇಶ ವರ್ಮಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ, ಸಂಘ ಸಂಸ್ಥೆಗಳ ಪ್ರಮುಖರು, ಗಣ್ಯರು, ಶಾಲಾ ಕಾಲೇಜು ವಿದ್ಯಾರ್ಥಿಗಳು ಇದ್ದರು.

## ಉತ್ತಮ ಶಿಕ್ಷಣದಿಂದ ಸದೃಢ ಭಾರತ ನಿರ್ಮಾಣ : ಅಶೋಕ ಹಂಚಲಿ

ಮಾತನಾಡಿ, ಇಂದಿನಶಿಕ್ಷಕರ ಕಾರ್ಯ ವೈಖರಿ ಓರೆಗಲ್ಲಿಗೆ ಹಚ್ಚುವಂತಾಗಿದೆ. ಶಿಕ್ಷಕರು ಶಿಸ್ತು,ಸಮಯದ ಪಾಲನೆ ಮಾಡದೇ ಇದ್ದರೆ ಅದರ ಕೆಟ್ಟ ಪರಿಣಾಮ ವಿದ್ಯಾರ್ಥಿಗಳಮೇಲೆ ದುಷ್ಪರಿಣಾಮ ಬೀರುತ್ತದೆ. ಇದನ್ನು ಅರಿತು ಶಿಕ್ಷಕರು ಉತ್ತಮ ಪಾಠಬೋಧನೆ ಜೊತಗೆ ಚಾರಿತ್ರ ??ವನ್ನು ಶುದ್ದವಾಗಿಟ್ಟುಕೊಳ್ಳಬೇಕು ಇಲ್ಲದೇಹೋದರೆ ಸಮಾಜದ ಅದಃಪತನಕ್ಕೆ ನಾಂದಿಯಾಗುತ್ತದೆ ಎಂದು ಎಚ್ಚರಿಸಿದರು.ಇದೇ ವೇಳೆ ಉತ್ತಮ ಶಿಕ್ಷಕರು ಹಾಗೂ ರಾಜ್ಯ, ಜಿಲ್ಲಾ ಮಟ್ಟದ ಪ್ರಶಸ್ತಿ ಪಡೆದಪತ್ರಕರ್ತರನ್ನು ಖಾಸಗಿ ಶಿಕ್ಷಣ ಸಂಸ್ಥೆಗಳಿಂದ ಅದ್ದೂರಿಯಾಗಿ ಸನ್ಮಾನಿಸಿಗೌರವಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀ ಅಮರೇಶ್ವರ ಗುರು ಅಭಿನವ ಗಜದಂಡ ಸ್ವಾಮಿಜಿ, ಖಾಸಗಿಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಮಲ್ಲಿಕಾರ್ಜುನ ಸ್ವಾಮಿ ತೋರಣದಿನ್ನಿ, ಬಿಇಓ ಸುಜಾತ ಹುನೂರು, ಸಿದ್ರಾಮಪ್ಪ ಸಾಹುಕಾರ, ನರಸಪ್ಪ ಯಾದವ್, ಸ್ವಾಗತ ಸಮಿತಿ ಅಧ್ಯಕ್ಷ ಸಂಜೀವ ಕುಮಾರ ಕಂದಗಲ್, ಆದಯ್ಯ ದಳಪತಿ, ಶಾಂತನಗೌಡ ಪಾಟೀಲ್ ದಿದ್ದಿಗಿ, ವಿನಯಕುಮಾರ ಗಣಾಚಾರಿ, ಶಿವಕುಮಾರ ಎನ್, ಗವಿಸಿದ್ದಪ್ಪಭಜಂತ್ರಿ ಗೌಡೂರು, ಪಿ.ಜಿ ಪವಾರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದ ನಾಯಕ, ಪುರಸಭೆ ಸದಸ್ಯ ಮಹಮ್ಮದ್ ರಫಿ, ಮಾಜಿ ಪುರಸಭೆ ಅಧ್ಯಕ್ಷ ಖಾದರಪಾಷಾ ಸೇರಿದಂತೆ ಇದ್ದರು

## ತಾಲೂಕು ಆಡಳಿತ ವತಿಯಿಂದ ನಡೆದ 77ನೇಯ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಸೆ.17–**ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ತಾಲೂಕು ಆಡಳಿತ ವತಿಯಿಂದ ನಡೆದ 77 ನೇಯ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಅಂಗವಾಗಿ ರಾಷ್ಟ್ರದ ತ್ರಿವರ್ಣ ಧ್ವಜರೋಹಣ ನೆರವೇರಿಸಿ ತಹಸೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿ 1947 ರಲ್ಲಿ ಭಾರತ ದೇಶಕ್ಕೆ ಬ್ರೀಟಿಷರಿಂದ ಸ್ವತಂತ್ರ ದೊರೆತ ನಂತರವು ಭಾರತ ದೇಶದಲ್ಲಿನ ಒಕ್ಕೂಟ ವ್ಯವಸ್ಥೆಯಲ್ಲಿ ಹೈದ್ರಾಬಾದ್ ನಿಜಾಂ ತಮ್ಮ ಸಂಸ್ಥಾನವನ್ನು ವಿಲಿನ ಮಾಡಿಕೊಳ್ಳುವುದಕ್ಕೆ ಒಪ್ಪದೆ ಇದ್ದುದರಿಂದ ನಿಜಾಮರ ಆಳ್ವಿಕೆಯಲ್ಲಿ ನಮ್ಮ ಕಲ್ಯಾಣ ಕರ್ನಾಟಕ ಇತ್ತು ಅಂದಿನ ಕೇಂದ್ರ ಗೃಹಮಂತ್ರಿಗಳಾದ ಸರ್ದಾರ್ ವಲ್ಲಭಾಯಿ ಪಟೇಲ್ ರವರು ಅಪರೇಶನ್ ಪೋಲೊ ಮೂಲಕ ಹೈದ್ರಾಬಾದ್ ನಿಜಾಮನ ಆಳ್ವಿಕೆಯನ್ನು ಕೊನೆಗೊಳಿಸಿ ಕಲ್ಯಾಣ ಕರ್ನಾಟಕವನ್ನು ವಿಮೋಚನೆ ಗೊಳ್ಳಿಸಿದರು ಎಂದು ತಿಳಿಸಿದರು.

ಶಾಸಕ ಹಂಪಯ್ಯನಾಯಕ ಮಾತನಾಡಿ ಸ್ವತಂತ್ರ ಪಡೆದ ನಂತರವು 13 ತಿಂಗಳ ಕಾಲ ಕಲ್ಯಾಣ ಕರ್ನಾಟಕ ಭಾಗ ನಿಜಾಮರ ಆಳ್ವಿಕೆಯಲ್ಲಿತ್ತು ,ಡಾ.ಬಿ.ಆರ್,ಅಂಬೇಡ್ಕರ್ ಹಾಗೂ ಸರ್ದಾರ್ ವಲ್ಲಭಾಯಿ ಪಟೇಲ್ ರವರು ಪೊಲೀಸ್ ಕಾರ್ಯಚಾರಣೆ ನಡೆಸುವ ಮೂಲಕ ಕಲ್ಯಾಣ ಕರ್ನಾಟಕ ಭಾಗದಲ್ಲಿ ರಜಕರ ದಬ್ಬಾಳಿಕೆಯಿಂದ ನಲುಗಿದ ಈ ಭಾಗದ ಜನರನ್ನು ವಿಮೋಚನೆ ಗೊಳಿಸಿದರು. ಕಲ್ಯಾಣ ಕರ್ನಾಟಕ ಭಾಗ ಶೈಕ್ಷಣಿಕವಾಗಿ ಸಾಮಾಜಿಕವಾಗಿ ಇನ್ನು ಹೆಚ್ಚಿನ ಅಭಿವೃದ್ಧಿ ಹೊಂದಬೇಕಾಗಿದ್ದು ಈ ನಿಟ್ಟಿನಲ್ಲಿ ಈ ಭಾಗದ ಜನರು ಶಿಕ್ಷಣಕ್ಕೆ ಹೆಚ್ಚಿನ ಅದ್ಯತೆಯನ್ನು ನೀಡುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷರಾದ ಮೀನಾಕ್ಷಿ ಡಿ. ರಾಮಕೃಷ್ಣ,ಹಿರಿಯ ಪುರಸಭೆ ಸದಸ್ಯರಾದ ರಾಜಾ ಮಹೇಂದ್ರ ನಾಯಕ,ಹೆಚ್.ಬಿ.ಎಂ,ಬಾಷ, ಗ್ಯಾರಂಟಿ ಸಮಿತಿ ಅಧ್ಯಕ್ಷ.ಬಿ.ಕೆ. ಅಂಬರೇಶಪ್ಪ, ತಾ.ಆರೋಗ್ಯಧಿಕಾರಿ ಡಾ.ಶರಣಬಸವ,ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್,ಪುರಸಭೆ ಮುಖ್ಯಾಧಿಕಾರಿ ಪರಶುರಾಮ್ ದೇವಮಾನೆ,ಪಿ.ಐ, ಸೋಮಶೇಖರ ಎಸ್.ಕೆಂಚರೆಡ್ಡಿ, ,ಮುಖಂಡರಾದ ಸೈಯಾದ್ ಖಾಲಿದ್ ಖಾದ್ರಿ,ನಾಗೇಶ ಕಬೇರ್,ಅಂಬಣ್ಣ ಮಾದ್ಲಾಪುರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದರು.

ಪುರಸಭೆ ಅವರಣದಲ್ಲಿ ಶಾಸಕ ಹಂಪಯ್ಯನಾಯಕ 77 ನೇಯ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಅಂಗವಾಗಿ ರಾಷ್ಟ್ರದ ತ್ರಿವರ್ಣ ಧ್ವಜರೋಹಣ ನೆರವೇರಿಸಿದರು. ತಾಲೂಕಿನ ವಿವಿಧ ಸರ್ಕಾರಿ ಕಚೇರಿಗಳಲ್ಲಿನ ತಾಲೂಕು ಮಟ್ಟದ ಅಧಿಕಾರಿಗಳು ರಾಷ್ಟ್ರಧ್ವಜರೋಹಣ ನೆರವೇರಿಸಿದರು.

## ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ವಿಕಲಚೇತನರಿಗೆ ಶೇ.5 ಅನುದಾನ ನೀಡುವಂತೆ ಮನವಿ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಸೆ.17–** ಪಟ್ಟಣದ ತಹಸೀಲ್ದಾರ್ ಕಚೇರಿಯ ಅವರಣದಲ್ಲಿ ಕರ್ನಾಟಕ ರಾಜ್ಯ ವಿಕಲಚೇತನರ ಸಂಘ–ಸಂಸ್ಥೆಗಳ ಒಕ್ಕೂಟ ತಾಲೂಕು ಸಮಿತಿ ವತಿಯಿಂದ ಶಾಸಕ ಹಂಪಯ್ಯನಾಯಕರವರಿಗೆ ವಿಕಲಚೇತನರ ಸಂಘ–ಸಂಸ್ಥೆಗಳ ಒಕ್ಕೂಟದ ಜಿಲ್ಲಾಧ್ಯಕ್ಷರಾದ ಮಹ್ಮದ್ ಜಾಫರ್ ಮನವಿ ಸಲ್ಲಿಸಿ ಮಾತನಾಡಿ



ವಿಕಲಚೇತನ ವ್ಯಕ್ತಿಗಳ ಹಕ್ಕುಗಳ ಕಾಯ್ದೆ ಅನ್ವಯ ಸರ್ಕಾರದ ಎಲ್ಲಾ ರಾಜ್ಯ ಸರ್ಕಾರದ ಎಲಾಖೆಗಳು ಹಾಗೂ ನಿಗಮ, ಮಂಡಳಿಗಳು ತಮ್ಮ ಬಡತನ ನಿರ್ಮೂಲನಾ ಮತ್ತು ಅಭಿವೃದ್ಧಿ ಯೋಜನೆಗಳಲ್ಲಿ ವಿಕಲಚೇತನರಿಗೆ ಶೇ. 5 ರಷ್ಟನ್ನು ಮೀಸಲಿಡಬೇಕು ಎನ್ನುವ ನಿಯಮವಿದ್ದರು ಕೂಡ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯು ವಿಕಲಚೇತನರಿಗಾಗಿ ಅನುದಾನವನ್ನು ಮೀಸಲಿಡದೆ ಇರುವುದರಿಂದ ವಿಕಲಚೇತನರಿಗೆ ವೈಯಕ್ತಿಕ ಸೌಲಭ್ಯಗಳನ್ನು ಹೊರತುಪಡಿಸಿ ಯಾವುದೆ ಸರ್ಕಾರದ ಸೌಲಭ್ಯಗಳು ದೊರೆಯುತ್ತಿಲ್ಲ.ಅದ್ದರಿಂದ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯವತಿಯಿಂದ ಈ ಭಾಗದ ಸರ್ಕಾರಿ ಕಚೇರಿ,ಶಾಲಾ ,ಕಾಲೇಜು,ಸಾರ್ವಜನಿಕ ಸ್ಥಳಗಳಲ್ಲಿ ರ್‍ಯಾಂಪ್ ಗಳನ್ನು ಅಳವಡಿಸಬೇಕು.ವಿಕಲಚೇತನ ಸ್ನೇಹಿ ಶೌಚಾಲಯಗಳ ನಿರ್ಮಾಣ,ವಿಲ್ ಚೇರ್, ವಿಕಲಚೇತನರ ಸಮುದಾಯ ಭವನ, ವಿಕಲಚೇತನರು ಬಳಸುವ ಸಾಧನ ಸಲಕರಣೆಗಳ ದುರಸ್ಥಿ ಮತ್ತು ಕೌಶಲ್ಯ ತರಬೇತಿ ಕೇಂದ್ರಗಳ ಸ್ಥಾಪನೆ. ಆರೋಗ್ಯ ,ಉದ್ಯೋಗ ಹಾಗೂ ಪುನರ್ವಸತಿಗೆ ಸಂಬಂಧಿಸಿದಂತೆ ಮೀಸಲು ಅನುದಾನವನ್ನು ಬಳಕೆ ಮಾಡುವುದಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ತಾ.ಅಧ್ಯಕ್ಷ ಹನುಮೇಶ ಕಾತರಕಿ,ದೊಡ್ಡನರಸಪ್ಪ, ಕೆ.ಬಾಷು ಖಾನ್,ಮಲ್ಲಿಕಾರ್ಜುನ ಸೇರಿದಂತೆ ಇನ್ನಿತರರು ಇದ್ದರು.

## ಶಿಕ್ಷಕ ಸಾಮ್ರಾಜ್ಯ ಕಟ್ಟುವ ನಾಯಕ : ಶಾಂತನಗೌಡ ಪಾಟೀಲ್

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಸೆ.17–**ಶಿಕ್ಷಕ ಒಬ್ಬ ವ್ಯಕ್ತಿ ಅಲ್ಲ, ಅವರ ಒಬ್ಬ ಅದ್ಭುತ ಶಕ್ತಿ, ಶಿಕ್ಷಕರಿಗೆ ಸಾಮ್ರಾಜ್ಯ ಕಟ್ಟುವ ಶಕ್ತಿ ಇದೆ ಎಂದು ಜಿಲ್ಲಾ ಉಪಾಧ್ಯಕ್ಷ ಹಾಗೂ ಸ್ವಾಮಿ ವಿವೇಕಾನಂದ ನರ್ಸಿಂಗ್ ಕಾಲೇಜು ಅಧ್ಯಕ್ಷ ಶಾಂತನಗೌಡ ಪಾಟೀಲ್ ದಿದ್ದಿಗಿ ಹೇಳಿದರು.




ಪಟ್ಟಣದ ಶ್ರಿ ವಿಜಯಮಾಹಾಂತೇಶ್ವರ ಮಠದಲ್ಲಿ ಹಮ್ಮಿಕೊಂಡಿದ್ದ 'ಶಿಕ್ಷಕರ ದಿನಾಚರಣೆ' ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಅನುಭವಕ್ಕೆ ಸಿಕ್ಕುವ ವೃತ್ತಿ ಶಿಕ್ಷಕ ವೃತ್ತಿ. ಶಿಕ್ಷಕ ವೃತ್ತಿಗೆ ಸಮಾಜದಲ್ಲಿ ತನ್ನದೇ ಸ್ಥಾನವಿದೆ. ಸಮಾಜದ ನಿರ್ಮಾಣ ಹಾಗೂ ವಿನಾಶ ಎರಡೂ ಶಿಕ್ಷಕನ ಮೇಲಿದೆ. ಶಿಕ್ಷಣ ಎಂಬುದು ಬದುಕು. ಅಕ್ಷರ ಹಾಗೂ ಒಗ್ಗಟ್ಟು ಇದ್ದರೆ ಏನನ್ನು ಬೇಕಾದರೂ ಸಾಧಿಸಬಹುದು ಎಂದು ಕಿವಿ ಮಾತು ಹೇಳಿದರು.

ಕನಸುಗಳು ಬಾಳಿನ ಭರವಸೆಗಳನ್ನು ಈಡೇರಿಸುತ್ತವೆ. ಮಕ್ಕಳು ನಾನು ಮುಂದೆ ಏನಾಗಬೇಕು ಎಂದು ಕನಸುಗಳನ್ನು ಕಾಣಬೇಕು. ಪೋಷಕರು ತಮ್ಮ ಮಕ್ಕಳಲ್ಲಿ ಒಂದೆರಡು ಕನಸುಗಳನ್ನು ಕಾಣುತ್ತಾರೆ. ಆದರೆ, ಶಿಕ್ಷಕರು ನೂರಾರು ಮಕ್ಕಳಲ್ಲಿ ನೂರಾರು ಕನಸುಗಳನ್ನು ಕಾಣುತ್ತಾರೆ ಎಂದರು.

## ಶಿಕ್ಷಣ, ಆರೋಗ್ಯ, ನೈರ್ಮಲ್ಯಕ್ಕೆ ಹೆಚ್ಚಿನ ಒತ್ತು ಕೊಡೋಣ: ಈಶ್ವರ್ ಕುಮಾರ

ಹೆಚ್ಚಿನ ಅನುದಾನ ನೀಡಲಾಗುತ್ತಿದೆ. ಸರ್ಕಾರದ ಪ್ರತಿನಿಧಿಗಳಾದ ನಾವುಗಳ ದಕ್ಷತೆಯಿಂದ ಕೆಲಸ ಮಾಡಬೇಕು. ಸಮಾಜದಲ್ಲಿನಅರ್ಹರಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸುವ ಕಾರ್ಯ ಮಾಡಬೇಕೆಂದು ತಿಳಿಸಿದರು.ಜಿಲ್ಲೆಯಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳಾಗಿವೆ. ಇನ್ನು ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಮಾಡಲು ಎಲ್ಲರ ಸಹಕಾರ, ಸಹಾಯ ಅಗತ್ಯ ಎಂದು ತಿಳಿಸಿದರು.ಕೆಕೆಆರ್ ಡಿ ಬಿ ಯಿಂದ ಈ ಭಾಗದ ಅಭಿವೃದ್ಧಿಗೆ ಹೆಚ್ಚಿನ ಅನುದಾನ ದೊರೆಯುತ್ತಿದೆ. ಇದು ಸದ್ಬಳಕೆಯಾಗಬೇಕಿದೆ. ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳನ್ನು ಅತ್ಯಂತ ಹಿಂದುಳಿದ ಜಿಲ್ಲೆಗಳೆಂದು ಗುರುತಿಸಲಾಗಿದೆ.ನಮ್ಮ ಜಿಲ್ಲೆಯಲ್ಲಿ ಶಿಕ್ಷಣ, ಆರೋಗ್ಯ, ಆಹಾರ ಹಾಗೂ ನೈರ್ಮಲ್ಯಕ್ಕೆ ಹೆಚ್ಚಿನ ಒತ್ತು ಕೊಡಬೇಕು ಎಂದು ತಿಳಿಸಿದರು.ಇದೇ ಸಂದರ್ಭದಲ್ಲಿ ಜಿಪಂ ಯೋಜನಾ ನಿರ್ದೇಶಕರಾದ ಶರಣಬಸವರಾಜ ಕೆಸರಟ್ಟಿ ಅವರು ಸ್ವಚ್ಛತಾ ಹೀ ಸೇವಾ ಆಂದೋಲನದ ಪ್ರತಿಜ್ಞಾ ವಿಧಿ ಬೋಧಿಸಿದರು.ಈ ವೇಳೆ ಜಿಪಂ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ಮುಖ್ಯ ಯೋಜನಾಧಿಕಾರಿ ಡಾ.ಟಿ. ರೋಣಿ, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ ಹಾಗೂ ವಿವಿಧ ಯೋಜನೆಗಳ ಅಧಿಕಾರಿ, ಸಿಬ್ಬಂದಿ ಇದ್ದರು.

ಯುವ ಮಾರ್ಗ

ಗುರುವಾರ : 18-09-2025

## ರಾಜ್ಯದಲ್ಲಿರುವುದು ಜನಾದೇಶದ ಸರ್ಕಾರವಲ್ಲ, ಮತಗಳ್ಳತನದ ಸರ್ಕಾರ



**ಬೆಂಗಳೂರು,ಸೆ.17–** ರಾಜ್ಯದಲ್ಲಿ ಈಗಿರುವುದು ಜನಾದೇಶದಿಂದ ಚುನಾಯಿತ ವಾದ ಸರ್ಕಾರ ಅಲ್ಲ, ಮತಗಳ್ಳತನದ ಮೂಲಕ ಅಧಿಕಾರ ಕಬಳಿಸಿರುವ ಮಾಫಿಯಾ ಸರ್ಕಾರ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಗಂಭೀರ ಆರೋಪ ಮಾಡಿದ್ದಾರೆ.ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಸಿದ್ದರಾಮಯ್ಯನವರನ್ನು 1999ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಹೇಗೆ ಸೋಲಿಸಿತು? 2018ರಲ್ಲಿ ಸಿದ್ದರಾಮಯ್ಯನವರು ಬಾದಾಮಿಯಲ್ಲಿ ಹೇಗೆ ಗೆದ್ದರು? ಎನ್ನುವುದಕ್ಕೆ ಮಾಲೂರು ವಿಧಾನಸಭಾ ಕ್ಷೇತ್ರದಲ್ಲಿ ನಡೆದಿರುವ ಚುನಾವಣಾ ಅಕ್ರಮವೇ ಉದಾಹರಣೆಯಾಗಿದೆ 7ಎಂದು ವಾಗ್ದಳಿ ನಡೆಸಿದ್ದಾರೆ.

ಇವಿಎಂಗಳಂತಹ ಆಧುನಿಕ ತಂತ್ರಜ್ಞಾನ ಬಂದಮೇಲೂ ಕಾಂಗ್ರೆಸ್ ಪಕ್ಷ ಇಂಥ ಚುನಾವಣಾ ಅಕ್ರಮ ಮಾಡುತ್ತದೆ ಎಂದರೆ, ಮತಪೆಟ್ಟಿಗೆ ಇದ್ದ ಕಾಲದಲ್ಲಿ ಕಾಂಗ್ರೆಸ್ ಪಕ್ಷ ಹೇಗೆ ಚುನಾವಣೆಗಳನ್ನು ಗೆಲ್ಲುತ್ತಿತ್ತು ಎನ್ನುವುದನ್ನು ನೀವೇ ಊಹಿಸಿಕೊಳ್ಳಿ! ಕಾಂಗ್ರೆಸ್ ಪಕ್ಷ ಮತಗಳ್ಳತನದ ಮಾಫಿಯಾ ಎಂದು ಅವರು ಟೀಕಿಸಿದ್ದಾರೆ.

## ಬಾಕಿ ರಸಗೊಬ್ಬರ ಪೂರೈಕೆಗೆ ಸುರ್ಜೇವಾಲ ಆಗ್ರಹ



**ಬೆಂಗಳೂರು,ಸೆ.17–**ಕೇಂದ್ರವು ಏಪ್ರಿಲ್‌ನಿಂದ ಸೆಪ್ಟೆಂಬರ್ 2025ರ ಅವಧಿಗೆ ರಾಜ್ಯಕ್ಕೆ ಪೂರೈಸಬೇಕಿದ್ದ 3.36 ಲಕ್ಷ ಮೆಟ್ರಿಕ್ ಟನ್ ಯೂರಿಯಾ ರಸಗೊಬ್ಬರ ಇನ್ನೂ ಬಾಕಿ ಇದೆ. ಆದಷ್ಟು ಶೀಘ್ರವಾಗಿ ಅದನ್ನು ಪೂರೈಸಲು ಕ್ರಮ ಕೈಗೊಳ್ಳುವಂತೆ ಸಂಸದರು ಹಾಗೂ ಪ್ರಧಾನ ಕಾರ್ಯದರ್ಶಿಗಳು, ಎಐಸಿಸಿ ಮತ್ತು ಕರ್ನಾಟಕ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವರಾದ ಶಿವರಾಜ್ ಸಿಂಗ್ ಚೌಹಾಣ್ ಅವರನ್ನು ಒತ್ತಾಯಿಸಿದ್ದಾರೆ.

ರಾಜ್ಯದಲ್ಲಿ ಮುಂಗಾರು ಮೊದಲೇ ಆಗಮನವಾಗಿದೆ ಮತ್ತು ಕರ್ನಾಟಕದಲ್ಲಿ ಸರಾಸರಿಗಿಂತ 3% ಹೆಚ್ಚು ಮಳೆಯಾಗಿರುವುದರಿಂದ, ಬಿತ್ತನೆ ನಿರೀಕ್ಷೆಗಿಂತ ಮೊದಲೇ ಪೂರ್ಣಗೊಂಡಿದೆ.ರಾಜ್ಯವು 2025–26 ರಲ್ಲಿ 114.40 ಲಕ್ಷ ಹೆಕ್ಟೇರ್‌ನಲ್ಲಿ ಬಿತ್ತನೆ ಗುರಿಯನ್ನು ಹೊಂದಿದೆ. ಆಹಾರ ಧಾನ್ಯಗಳು ಮತ್ತು ಎಣ್ಣೆಕಾಳುಗಳ ಉತ್ಪಾದನೆಯ ಗುರಿ 160.68 ಲಕ್ಷ ಟನ್. ಮುಂಗಾರು ಹಂಗಾಮಿಗೆ ಬಿತ್ತನೆ ಗುರಿ 82.50 ಲಕ್ಷ ಹೆಕ್ಟೇರ್ ಆಗಿದ್ದು, ಈಗಾಗಲೇ 81.85 ಲಕ್ಷ ಹೆಕ್ಟೇರ್‌ನಲ್ಲಿ ಬಿತ್ತನೆ ಮಾಡಲಾಗಿದೆ.

ಮುಂಗಾರು ಹಂಗಾಮಿನಲ್ಲಿ ವಿವಿಧ ರಾಸಾಯನಿಕ ಗೊಬ್ಬರಗಳ ಬೇಡಿಕೆ 26.77 ಲಕ್ಷ ಮೆಟ್ರಿಕ್ ಟನ್ ಎಂದು ಅಂದಾಜಿಸಲಾಗಿದೆ. 3.36 ಲಕ್ಷ ಮೆಟ್ರಿಕ್ ಟನ್ ಯೂರಿಯಾ ಗೊಬ್ಬರದ ಕೊರತೆಯಿದೆಕೇಂದ್ರ ಸರ್ಕಾರದಿಂದ ರಸಗೊಬ್ಬರಗಳ ಪೂರೈಕೆಯಲ್ಲಿನ ಕಡಿತದಿಂದಾಗಿ ಕರ್ನಾಟಕವು ರಸಗೊಬ್ಬರ ಕೊರತೆಯನ್ನು ಎದುರಿಸುತ್ತಿದೆ. ಈ ವರ್ಷ ಯೂರಿಯಾ ಪೂರೈಕೆಯಲ್ಲಿ ಶೇ.50 ರಷ್ಟು ಇಳಿಕೆಯಾಗಿದೆ. ರೈತರ ಹಿತಾಸಕ್ತಿಗಳನ್ನು ಗಮನದ ಲ್ಲಿಟ್ಟುಕೊಂಡು, ಕರ್ನಾಟಕದ ರೈತರಿಗೆ ಸಾಧ್ಯವಾದಷ್ಟು ಬೇಗ ಯೂರಿಯಾ ಗೊಬ್ಬರ ಪೂರೈಕೆಯಾಗುವಂತೆ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

ಕರ್ನಾಟಕ ರಾಜ್ಯ ಕೃಷಿ ಸಚಿವ ಚಲುವರಾಯಸ್ವಾಮಿ ಅವರು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರನ್ನು ಭೇಟಿ ಮಾಡಿ ಕರ್ನಾಟಕಕ್ಕೆ ಸರಬರಾಜು ಮಾಡಲು 3.36 ಲಕ್ಷ ಮೆಟ್ರಿಕ್ ಟನ್ ಯೂರಿಯಾ ಗೊಬ್ಬರವನ್ನು ಬಿಡುಗಡೆ ಮಾಡುವಂತೆ ವಿನಂತಿಸಿದ್ದಾರೆ. ಕೇಂದ್ರ ಸರ್ಕಾರವು ಅವರ ಮನವಿಯನ್ನು ಸ್ವೀಕರಿಸಿ ರಾಜ್ಯದ ರೈತರ ಹಿತಾಸಕ್ತಿ ಕಾಪಾಡಬೇಕು ಎಂದಿದ್ದಾರೆ.

## 305 ಕೋಟಿ ರೂ. ಆಸ್ತಿ ವಶ

**ಬೆಂಗಳೂರು, ಸೆ.17–** ಒತ್ತುವರಿದಾರರಿಗೆ ಬೆಳ್ಳಂ ಬೆಳಗ್ಗೆ ಬಿಸಿ ಮುಟ್ಟಿಸಿರುವ ಬಿಡಿಎ ಅಧಿಕಾರಿಗಳು, ಇಲ್ಲಿನ ಜೆಪಿ ನಗರ 9ನೇ ಫೇಸ್ 1ನೇ ಬ್ಲಾಕ್ ನಲ್ಲಿ ಗ್ರಾಮದಲ್ಲಿ 305 ಕೋಟಿ ಮೌಲ್ಯದ ಆಸ್ತಿಯನ್ನು ವಶಪಡಿಸಿಕೊಂಡಿದ್ದಾರೆ.ಬುಧವಾರ ಬೆಳಗ್ಗೆಯೇ ಆವಲಹಳ್ಳಿಯ ಜೆಪಿ ನಗರ 9ನೆ ಫೇಸ್ 1ನೇ ಬ್ಲಾಕ್ ನಲ್ಲಿ ಕಾರ್ಯಾಚರಣೆ ಕೈಗೊಂಡ ಬಿಡಿಎ ಅಧಿಕಾರಿಗಳ ತಂಡ, ಜೆಸಿಬಿಗಳ ಮೂಲಕ ಅನಧಿಕೃತವಾಗಿ ನಿರ್ಮಾಣ ಮಾಡಿದ್ದ ಶೆಡ್ ಗಳನ್ನು ತೆರವುಗೊಳಿಸಿದರು.ನಾಗರಿಕ ಸೌಲಭ್ಯ ನಿವೇಶನಗಳಲ್ಲಿ ತಲೆ ಎತ್ತಿದ್ದ ಅನಧಿಕೃತ ನಿರ್ಮಾಣಗಳನ್ನು ತೆರವುಗೊಳಿಸಲಾಗಿದೆ ಎಂದು ಬಿಡಿಎ ಅಧಿಕಾರಿಗಳು ಮಾಹಿತಿ ನೀಡಿದರು.ಈ ಕಾರ್ಯಾಚರಣೆಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕಾರ್ಯನಿರತ ಪಡೆಯ ಆರಕ್ಷಕ ಅಧೀಕ್ಷಕರು, ದಕ್ಷಿಣ ವಿಭಾಗದ ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಸ್ಥಳೀಯ ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ನೆರವೇರಿಸಲಾಯಿತು ಎಂದು ಬಿಡಿಎ ಅಧಿಕಾರಿಗಳು ತಿಳಿಸಿದರು.

# ಪರಮಾಣು ಬೆದರಿಕೆಗಳಿಗೆ ಬಗ್ಗಲ್ಲ, ಕೆಣಕಿದರೆ ನುಗ್ಗಿ ಹೊಡೆಯುತ್ತೇವೆ : ಭಾರತದ ಶತ್ರುಗಳಿಗೆ ಮೋದಿ ಎಚ್ಚರಿಕೆ

**ಧರ್(ಮಧ್ಯಪ್ರದೇಶ),ಸೆ.17–** ಜಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ನರಮೇಧಕ್ಕೆ ಪ್ರತಿಕಾರವಾಗಿ ಭಾರತೀಯ ಸೇನಾಪಡೆ ನಡೆಸಿದ ಆಪರೇಷನ್ ಸಿಂಧೂರ್ ಯಶಸ್ಸನ್ನು ಶ್ಲಾಘಿಸಿರುವ ಪ್ರಧಾನಿ ನರೇಂದ್ರಮೋದಿ, ಭಾರತ ಪರಮಾಣು ಬೆದರಿಕೆಗಳಿಗೆ ಹೆದರುವ ಪ್ರಶ್ನೆಯೇ ಇಲ್ಲ ಎಂದು ಮತ್ತೆ ಪಾಕಿಸ್ತಾನಕ್ಕೆ ಎಚ್ಚರಿಕೆ ಸಂದೇಶ ರವಾನಿಸಿದ್ದಾರೆ.

ಮಧ್ಯಪ್ರದೇಶದ ಧರ್‌ನಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿ ಮಾತನಾಡಿದ ಮೋದಿಯವರು , ಕೆಲವರು ಪರಮಾಣು ಬಾಂಬ್‌ಗಳನ್ನು ಇಟ್ಟುಕೊಂಡು ನಮನ್ನು ಬ್ಲಾಕ್‌ಮೇಲ್ ಮಾಡಲು ಬರುತ್ತಿದ್ದಾರೆ. ಅವರಿಗೆ ಇಲ್ಲಿಂದಲೇ ನಾನು ಎಚ್ಚರಿಕೆ ಕೊಡುತ್ತೇನೆ. ಭಾರತವು ಕೂಡ ಪರಮಾಣು ರಾಷ್ಟ್ರ ಎಂಬುದನ್ನು ಮರೆಯಬೇಡಿ ಎಂದು ಗುಡುಗಿದರು.ಇದು ಹೊಸ ಭಾರತ. ಇದು ಯಾರಿಗೂ ಹೆದರುವುದಿಲ್ಲ. ಭಾರತೀಯ ಪಡೆಗಳು ಮನೆಗಳಿಗೆ ನುಗ್ಗಿ ಶತ್ರುಗಳನ್ನು

ಹೊಡೆಯುವ ಶಕ್ತಿಯನ್ನು ಹೊಂದಿವೆ. ಹೊಸ ಭಾರತ ಪರಮಾಣು ಬೆದರಿಕೆಗಳಿಗೆ ಹೆದರುವುದಿಲ್ಲ. ಪಾಕಿಸ್ತಾನ ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಅವರು ಭಾರತದೊಂದಿಗೆ ಭವಿಷ್ಯದ ಯುದ್ಧದಲ್ಲಿ ಇಸ್ಲಾಮಾಬಾದ್ ಅಸ್ತಿತ್ವದ ಬೆದರಿಕೆಯನ್ನು ಎದುರಿಸಿದರೆ ಪರಮಾಣು ಯುದ್ಧ ಮತ್ತು ಅರ್ಧ ಪ್ರಪಂಚವನ್ನು ನಾಶಮಾಡುವ ಬೆದರಿಕೆಯ ಬಗ್ಗೆ ನೀಡಿದ್ದ ಎಚ್ಚರಿಕೆಯನ್ನು ಅವರು ಸ್ಪಷ್ಟವಾಗಿ ಉಲ್ಲೇಖಿಸಿದರು.

ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ತನ್ನ ಭಯೋತ್ಪಾದಕ ಶಿಬಿರಗಳ ಮೇಲೆ ಆಪರೇಷನ್ ಸಿಂಧೂರ್ ಸಮಯದಲ್ಲಿ ನಷ್ಟವನ್ನು ಭಯೋತ್ಪಾದಕ ಗುಂಪು ಜೈಶ್–ಎ–ಮೊಹಮದ್ (ಜೆಇಎಂ) ಒಪ್ಪಿಕೊಂಡಿರುವುದು ನವದೆಹಲಿಯ ವಿರುದ್ಧ ಭಯೋತ್ಪಾದನೆಯನ್ನು ಪ್ರಾಯೋಜಿಸುವಲ್ಲಿ ಇಸ್ಲಾಮಾಬಾದ್ ಪಾತ್ರವನ್ನು ಬಹಿರಂಗಪಡಿಸಿದೆ ಎಂದು ಅವರು ಹೇಳಿದರು.

ಆಪರೇಷನ್ ಸಿಂಧೂರ್ ಸಮಯದಲ್ಲಿ ಬಹಾವಲ್ಪುರದಲ್ಲಿ ಭಾರತೀಯ ಪಡೆಗಳು ಜೈಶ್– ಎ– ಮೊಹಮದ್ ಸಂಘಟನೆಯ ಮುಖ್ಯಸ್ಥ ಮೌಲಾನಾ ಮಸೂದ್ ಅಜರ್ ಅವರ ಕುಟುಂಬವನ್ನು ಛಿದ್ರ ಛಿದ್ರ ಮಾಡಿವೆ ಎಂದು ಜೆಇಎಂನ ಉನ್ನತ ಸದಸ್ಯ ಮಸೂದ್ ಇಲ್ಯಾಸ್ ಕಾಶ್ಮೀರಿ ಹೇಳಿದ ಮರುದಿನವೇ ಮೋದಿ ಇದನ್ನು ಉಲ್ಲೇಖಿಸಿದ್ದಾರೆ.

ಇದೇ ವೇಳೆ ಮೋದಿ ಅವರು, ಜಿಲ್ಲೆಯಲ್ಲಿ ದೇಶದ ಮೊದಲ ಪ್ರಧಾನ ಮಂತ್ರಿ ಮೆಗಾ ಇಂಟಿಗ್ರೇಟೆಡ್ ಜವಳಿ ಪ್ರದೇಶ ಮತ್ತು ಉಡುಪು (ಪಿಎಂ ಮಿತ್ರ) ಉದ್ಯಾನವನಕ್ಕೆ ಪ್ರಧಾನಿ ಶಂಕುಸ್ಥಾಪನೆ ನೆರವೇರಿಸಿದರು. ಟಿಸ್ವಸ್ಥ ನಾರಿ ಸಶಕ್ತ ಪರಿವಾರ್‌ಟಿ ಮತ್ತು ರಾಷ್ಟ್ರೀಯ ಪೋಷಣಾ ಮಾಹ್‌ಟಿ ಅಭಿಯಾನಗಳಿಗೂ ಚಾಲನೆ ನೀಡಿದರು.

ಮಧ್ಯಪ್ರದೇಶ, ತೆಲಂಗಾಣ, ಗುಜರಾತ್, ಕರ್ನಾಟಕ, ಉತ್ತರ ಪ್ರದೇಶ ಮತ್ತು ಮಹಾರಾಷ್ಟ್ರದ ಏಳು ಸ್ಥಳಗಳಲ್ಲಿ ವಿಶ್ವ ದರ್ಜೆಯ ಮೂಲಸೌಕರ್ಯ ಮತ್ತು ಸೌಲಭ್ಯಗಳೊಂದಿಗೆ ದೊಡ್ಡ ಪ್ರಮಾಣದ ಜವಳಿ ಉತ್ಪಾದನಾ ಕೇಂದ್ರಗಳನ್ನು ಸ್ಥಾಪಿಸುವುದು ಪಿಎಂ ಮಿತ್ರ ಯೋಜನೆಯ ಉದ್ದೇಶವಾಗಿದೆ. ಧಾರ್ ಜಿಲ್ಲೆಯ ಭೈನ್ಸೊಲಾ ಗ್ರಾಮದಲ್ಲಿ ಸುಮಾರು 2,158 ಎಕರೆ ಪ್ರದೇಶದಲ್ಲಿ ಪಿಎಂ ಮಿತ್ರ ಪಾರ್ಕ್ ತಲೆ ಎತ್ತಲಿದೆ. ಇದು ವಿಶ್ವ ದರ್ಜೆಯ ಸೌಲಭ್ಯಗಳನ್ನು ಹೊಂದಿದ್ದು, ಹತ್ತಿ ಉತ್ಪಾದಕರಿಗೆ ಹೇರಳವಾಗಿ ಪ್ರಯೋಜನವನ್ನು ನೀಡುತ್ತದೆ ಎಂದು ಅದು ಹೇಳಿದೆ. ಮಾನಸಿಕ ಆರೋಗ್ಯ, ಲಿಂಗ ಸಮಾನತೆ, ಹದಿಹರೆಯದವರ ರಕ್ತಹೀನತೆ ನಿರ್ವಹಣೆ



ಮತ್ತು ಸಕ್ರಿಯ ಜೀವನಶೈಲಿಯ ಮೇಲೆ ಕೇಂದ್ರಿಕರಿಸುವ ಮೂಲಕ ಮಹಿಳೆಯರ ಆರೋಗ್ಯಕ್ಕೆ ಆದ್ಯತೆ ನೀಡುವ ಸ್ವಸ್ಥ್ ನಾರಿ ಸಶಕ್ತ ಪರಿವಾರ್ ಅಭಿಯಾನವು ಆಯುಷ್ಮಾನ್ ಆರೋಗ್ಯ ಮಂದಿರಗಳಲ್ಲಿ (ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳು) ಅಕ್ಟೋಬರ್ 2ರವರೆಗೆ ನಡೆಯಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಭಾರತದಲ್ಲಿರುವ ಕೋಟ್ಯಂತರ ತಾಯಂದಿರು ಮತ್ತು ಸಹೋದರಿಯರು ನನ್ನನ್ನು ಆಶೀರ್ವ ದಿಸುತ್ತಿದ್ದಾರೆ. ಧಾರ್‌ನಲ್ಲಿರುವ ದೇಶದ ಅತಿದೊಡ್ಡ ಸಮಗ್ರ ಜವಳಿ ಉದ್ಯಾನವನವು ಉದ್ಯಮಕ್ಕೆ ಹೊಸ ಶಕ್ತಿಯನ್ನು ಒದಗಿಸುತ್ತದೆ ಮತ್ತು ರೈತರ ಉತ್ಪನ್ನಗಳಿಗೆ ನ್ಯಾಯಯುತ ಮೌಲ್ಯವನ್ನು ನೀಡುತ್ತದೆ. 1948 ರ ಈ ದಿನದಂದು, ನಮ ಸೇನೆಯು ಹೈದರಾಬಾದ್ ಅನ್ನು ಸ್ವತಂತ್ರಗೊಳಿಸಿ ಭಾರತದ ಹೆಮ್ಮೆಯನ್ನು ಪುನಃಸ್ಥಾಪಿಸಿದಾಗ ಸರ್ದಾರ್ ಪಟೇಲ್ ಅವರ ದೃಢವಾದ ಇಚ್ಛಾಶಕ್ತಿ ಕಂಡುಬಂದಿತು ಎಂದು ಹೈದರಾಬಾದ್ ವಿಮೋಚನಾ ದಿನವನ್ನು ಉಲ್ಲೇಖಿಸುತ್ತಾ ಅವರು ಹೇಳಿದರು.

## ನಿಖಿಲ್ ಕುಮಾರಸ್ವಾಮಿ ಬೀದರ್ ಜಿಲ್ಲಾ ಸಂಚಾರ: ಬೆಳೆ, ಮನೆ ಹಾನಿ ವೀಕ್ಷಣೆ; ಪರಿಹಾರಕ್ಕೆ ಒತ್ತಾಯ



**ಬೀದರ್ ಸೆ.17–** ಜೆಡಿಎಸ್ ಪಕ್ಷದ ಯುವ ಜನತಾದಳದ ರಾಜ್ಯಾಧ್ಯಕ್ಷರಾಗಿರುವ ನಿಖಿಲ್ ಕುಮಾರಸ್ವಾಮಿರವರು ಸೆಪ್ಟೆಂಬರ್ 16ರಂದು ಮಂಗಳವಾರ ಬೀದರ್ ಜಿಲ್ಲಾ ಪ್ರವಾಸ ಕೈಗೊಂಡು, ಜಿಲ್ಲೆಯಲ್ಲಿ ಭಾರಿ ಮಳೆ ಮತ್ತು ಪ್ರವಾಹದಿಂದ ಹಾನಿಗೊಳಗಾದ ಪ್ರದೇಶಗಳ ವೀಕ್ಷಣೆ ಮತ್ತು ನೊಂದ ಸಂತ್ರಸ್ಥರ ಭೇಟಿ ಮತ್ತು ಸಾಂತ್ವನ ಹಾಗೂ ಸರ್ಕಾರ ಕೈಗೊಂಡಿರುವ ನೆರೆ ಪರಿಹಾರ ಕಾರ್ಯಗಳ ಬಗ್ಗೆ ಪರಿಶೀಲನೆ ನಡೆಸಿದರು.

ಜೆಡಿಎಸ್ ಪಕ್ಷದ ಮುಖಂಡರು, ಕಾರ್ಯಕರ್ತರೊಂದಿಗೆ ಬೀದರ್ ಉತ್ತರ ವಿಧಾನಸಭಾ ಕ್ಷೇತ್ರದ ಮರಕಲ್, ಅಲಿಯಂಬರ್, ಇಸ್ಲಾಂಪೂರ, ಜಾಂಪಾಡ್ ಗ್ರಾಮಗಳ ರೈತರ ಜಮೀನುಗಳಿಗೆ ಮಂಗಳವಾರ ಬೆಳಗ್ಗೆ ಭೇಟಿ ನೀಡಿದ ಅವರು, ಜಮೀನಿನಲ್ಲಿ ನಿಂತಿರುವ ನೀರಿನಲ್ಲೇ ತೆರಳಿ ಬೆಳೆ ಹಾನಿ ಪರಿಶೀಲನೆ ನಡೆಸಿ, ಅಲ್ಲಿದ್ದ ರೈತರಿಂದ ಮಾಹಿತಿ ಪಡೆದುಕೊಂಡರು.

ಇದೇ ವೇಳೆ ಮರಕಲ್ ಹಾಗೂ ಇತರೆ ಗ್ರಾಮಗಳಲ್ಲಿ ಹಾನಿಗೊಳಗಾದ ಮನೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ನಿಖಿಲ್ ಕುಮಾರಸ್ವಾಮಿರವರು, ಮನೆ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿದ ಸಂತ್ರಸ್ತರಿಗೆ ಧನ ಸಹಾಯ ಮಾಡಿದರು.

ಈ ವೇಳೆ ಮಾತನಾಡಿದ ಅವರು, ನಾನು ಈಗಾಗಲೇ ಕಲ್ಯಾಣ ಕರ್ನಾಟಕ ಭಾಗದ ಕಲಬುರಗಿ ಮತ್ತು ಬೀದರ್ ಜಿಲ್ಲೆಯ ಪ್ರವಾಸ ಮಾಡ್ತಿದ್ದೇನೆ. ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ರೈತರು, ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಅಪಾರ ಪ್ರಮಾಣದ ಬೆಳೆ ಹಾನಿ ಉಂಟಾಗಿದೆ. ಸಾಕಷ್ಟು ಜನರು ಮನೆ ಕಳೆದುಕೊಂಡು ಸಮಸ್ಯೆಗೆ ಸಿಲುಕಿದ್ದಾರೆ.ರಾಜ್ಯ ಸರ್ಕಾರ ಕೂಡಲೇ ಬೆಳೆ ಕಳೆದುಕೊಂಡ ರೈತರ ಮತ್ತು ಮನೆ ಕಳೆದುಕೊಂಡ ಸಂತ್ರಸ್ತರ ನೆರವಿಗೆ ಧಾವಿಸಬೇಕು. ಮಳೆಯಿಂದಾಗಿ ಉಂಟಾಗಿರುವ ಹಾನಿಯ ಬಗ್ಗೆ ನಾನು ಕೇಂದ್ರ ಸರ್ಕಾರಕ್ಕೆ ಮಾಹಿತಿ ನೀಡಿ ಕೇಂದ್ರದಲ್ಲಿಂದಲೂ ಪರಿಹಾರ ನೀಡುವಂತೆ ಮನವಿ ಮಾಡುತ್ತೇನೆ ಎಂದು ನಿಖಿಲ್ ಕುಮಾರಸ್ವಾಮಿರವರು ಭರವಸೆ ನೀಡಿದರು.

ಈ ವೇಳೆ ಮಾಜಿ ಸಚಿವರು ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್, ಜೆಡಿಎಸ್ ಜಿಲ್ಲಾಧ್ಯಕ್ಷರಾದ ರಮೇಶ್ ಪಾಟೀಲ್ ಸೋಲಪೂರ್, ರಾಜ್ಯ ಪ್ರಧಾನ ಕಾರ್ಯದರ್ಶಿ ಶಿವಕುಮಾರ್ ನಾಟೇಕರ್, ಪ್ರಮುಖರಾದ ಸೂರ್ಯಕಾಂತ್ ನಾಗಮಾರಪಳ್ಳಿ, ಐಲಿಂಜಾನ್ ಮಠಪತಿ, ಅಶೋಕ್ ಕೊಡಗೆ ಶಾಂತಲಿಂಗ ಸಾಳಗಿ, ರಾಜಶೇಖರ ಜವಳೆ, ದೇವೇಂದ್ರ ಸೋನಿ, ಲಲಿತಾ ಕರಂಜೆ, ಶಿವಪುತ್ರ ಮಾಳಿಗೆ, ಬಸವರಾಜ್ ಪಾಟೀಲ್ ಹಾರೂರಗೇರಿ, ರಾಜು ಚಿಂತಾಮಣಿ, ಸುದರ್ಶನ್ ಸುಂದರರಾಜ್, ಅಭಿ ಕಾಳೆ, ಬೊಮಗೊಂಡ ಚಿಟ್ಟಾವಾಡಿ, ರೇವಣಸಿದ್ದಪ್ಪ ಪಾಟೀಲ್, ಬಸವರಾಜ್ ಶಹಾಪೂರೆ, ಮಲ್ಲಿಕಾರ್ಜುನ ನೆಳಗೆ, ಪ್ರಶಾಂತ್ ವಿಶ್ವಕರ್ಮ, ಸಂಗು ಚಿದ್ರಿ, ಜಾಪೇಡ್ ಕಡ್ಯಾಳ, ತಾನಾಜಿ ತೋರಣೇಕರ್, ಮನೋಹರ್ ದಂಡೆ, ಅರುಣಕುಮಾರ್, ತರುಣ್ ನಾಗಮಾರಪಳ್ಳಿ ಸೇರಿದಂತೆ ಅನೇಕರಿದ್ದರು.

## ಪುಟಾಣಿ ಬಾಲಕಿಯನ್ನು ಮೂರನೇ ಮಹಡಿಯಿಂದ ಎಸೆದು ಕೊಂದ ಮಲತಾಯಿ

**ಬೀದರ್:ಸೆ.17–**ಬೀದರನಲ್ಲಿ ಮಲತಾಯಿ ಪುಟ್ಟ ಕಂದಮ್ಮನ ಪಾಲಿಗೆ ವಿಲನ್ ಆಗಿದ್ದಾಳೆ. 7 ವರ್ಷದ ಮಗುವನ್ನು ಥರ್ಡ್ ಫ್ಲೋರ್ ನಿಂದ ನೂಕಿ ರಾಕ್ಷಸಿ ಕೃತ್ಯ ಎಸಗಿದ್ದಾಳೆ.

ಮೃತ ಬಾಲಕಿಯನ್ನು ಶಾನವಿ ಎಂದು ಗುರುತಿಸಲಾಗಿದೆ. ಬೀದರ್ ನ ಆದರ್ಶ ಕಾಲೋನಿಯಲ್ಲಿ ಘಟನೆ ನಡೆದಿದ್ದು, ಆಗಸ್ಟ್ 27ರಂದು ನಡೆದಿರೋ ಕೃತ್ಯ ತಡವಾಗಿ ಬೆಳಕಿಗೆ ಬಂದಿದೆ.ಪಕ್ಕದ ಮನೆಯ ಸಿಸಿ ಕ್ಯಾಮೆರಾ ದೃಶ್ಯಗಳನ್ನು ಪರಿಶೀಲಿಸಿದಾಗ ಮಲತಾಯಿ ರಾಧಾಳ ನಿಜಬಣ್ಣ ಬಯಲಾಗಿದೆ. ಈಗಾಗಲೇ ಈ ಸಂಬಂಧ ಮಲತಾಯಿ ರಾಧಾಳನ್ನು ಪೊಲೀಸರು ಬಂಧಿಸಿದ್ದಾರೆ.ಶಾನವಿ ಮೃತಪಟ್ಟಾಗ ಮಹಡಿಯಿಂದ ಆಯತಪ್ಪಿ ಬಿದ್ದು ಮಗಳು ಜೀವ ಬಿಟ್ಟಿದ್ದಾಳೆ ಎಂದು ಕುಟುಂಬಸ್ಥರು ಅಂದುಕೊಂಡಿದ್ದರು. ಆದ್ರೆ ಪಕ್ಕದ ಮನೆಯವರು ಸಿಸಿಟಿವಿ ದೃಶ್ಯ ಕಳುಹಿಸಿದ ಬಳಿಕ ಮಲತಾಯಿ ಕೃತ್ಯ ಬೆಳಕಿಗೆ ಬಂದಿದ್ದು, ಶಾನವಿ ತಮ್ಮ ಕುಟುಂಬಕ್ಕೆ ಹೊರೆಯಾಗ್ತಾಳೆ ಅನ್ನೋಕಾರಣಕ್ಕೆ ರಾಧಾ ಈ ರೀತಿ ಮಾಡಿದ್ದಾಳೆ.

ಮೃತ ಶಾನವಿ ತಾಯಿ ಖಾಯಿಲೆಗೆ ತುತ್ತಾಗಿ ಕಳೆದ 6 ವರ್ಷಗಳ ಹಿಂದೆಯೇ ಸಾವನ್ನಪ್ಪಿದ್ದಳು. ಇದಾದ ಬಳಿಕ ಮೃತ ಶಾನವಿ ತಂದೆ ಸಿದ್ಧಾಂತ, 2023ರಲ್ಲಿ ರಾಧಾ ಜೊತೆ 2ನೇ ವಿವಾಹವಾಗಿದ್ದರು. ಸಿದ್ಧಾಂತ ಹಾಗೂ ರಾಧಾಗೆ ಎರಡು ಅವಳಿ ಮಕ್ಕಳು ಹುಟ್ಟಿದರು. ಇದಾದ ಬಳಿಕ ಶಾನವಿ ಮೇಲೆ ರಾಧಾಳಿಗೆ ತಾತ್ಸಾರ ಶುರುವಾಗಿತ್ತು. ಭವಿಷ್ಯದಲ್ಲಿ ಈಕೆ ತನಗೆ ಹೊರೆಯಗಬಹುದು ಅನ್ನೋ ಕಾರಣಕ್ಕೆ ರಾಧಾ ಈ ತಈ ರೀತಿ ಮಾಡಿದ್ದಾಳೆ.ಸಿಸಿಟಿವಿ ದೃಶ್ಯ ಆಧರಿಸಿ ಮೃತ ಬಾಲಕಿ ಅಜ್ಜಿ, ರಾಧಾ ವಿರುದ್ಧ ದೂರು ನೀಡಿದ್ದು, ಈ ದೂರು ದಾಖಲಿಸಿಕೊಂಡು ಪೊಲೀಸರು ಆರೋಪಿ ರಾಧಾಳನ್ನು ಬಂಧಿಸಿ ಜೈಲಿಗೆ ಕಳುಹಿಸಿದ್ದಾರೆ. ವಿವಿಧ ಆಯಾಮಗಳಲ್ಲಿ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.ಇನ್ನು,ದುಷ್ಕರ್ಮಿಗಳಿಬ್ಬರು ಮಹಿಳೆಯೊಬ್ಬರ ಮೇಲೆ ಮಚ್ಚು ಬೀಸಿ ಸರಗಳ್ಳತನ ನಡೆಸಿರುವ ಭೀಕರ ಘಟನೆ ಬೆಂಗಳೂರಿನಲ್ಲಿ ಗಿರಿನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಸರಗಳ್ಳರ ಉಪಟಳ ಇತ್ತೀಚೆಗೆ ವಿಪರೀತ ಮಿತಿ ಮೀರಿದ್ದು ಜನರಿಂದ ಭಾರೀ ಆಕ್ರೋಶ ವ್ಯಕ್ತವಾಗಿದೆ.

ಈಶ್ವರಿ ನಗರದಲ್ಲಿ ಈ ಘಟನೆ ನಡೆದಿದ್ದು, ಉಷಾ ಹಾಗೂ ವರಲಕ್ಷ್ಮೀ ಎಂಬ ಇಬ್ಬರು ಮಹಿಳೆಯರು ರಾತ್ರಿ ವೇಳೆ ಗಣೇಶ ಹಬ್ಬದ ಆರ್ಕೆಸ್ಟ್ರಾ ನೋಡಿ ಮನೆಗೆ ತೆರಳುತ್ತಿದ್ದರು. ಈ ವೇಳೆ ಪಲ್ಸರ್ ಬೈಕ್ ನಲ್ಲಿ ಹಿಂದಿನಿಂದ ಬಂದಿದ್ದ ಆರೋಪಿಗಳು ಹಿಂದಿನಿಂದು ಬಂದು ಮಹಿಳೆಯ ಕುತ್ತಿಗೆಗೆ ಮಚ್ಚು ಇಟ್ಟು ಬೆದರಿಕೆ ಹಾಕಿ ಸರ ನೀಡುವಂತೆ ಒತ್ತಾಯಿಸಿದ್ದರು.

ಮಾರಕಾಸ್ತ್ರಗಳನ್ನು ಕಂಡು ಭಯಭೀತಗೊಂಡ ಉಷಾ ಕೂಡಲೇ ತಮ್ಮ ಕೊರಳಲ್ಲಿದ್ದ ಚಿನ್ನದ ಸರ ನೀಡಿದ್ದರು. ನಂತರ ವರಲಕ್ಷ್ಮೀ ಬಳಿ ಚಿನ್ನದ ಸರ ಕೇಳಿದಾಗ ಅವರು ಸರ ನೀಡಲು ನಿರಾಕರಿಸಿ ಪ್ರತಿರೋಧ ಒಡ್ಡಿದ್ದರು. ಇದರಿಂದ ಕುಪಿತಗೊಂಡ ದುಷ್ಕರ್ಮಿಗಳು ಮಚ್ಚು ಬೀಸಿದ್ದರು. ಇದರಿಂದ ವರಲಕ್ಷ್ಮಿಯವರ ಕೈಬೆರಳು ತುಂಡಾಗಿತ್ತು. ಪಾತಕಿಗಳು ವರಲಕ್ಷ್ಮಿಯವರ ಕೈಯಿಂದ ಸರ ಕಿತ್ತುಕೊಂಡು ಪರಾರಿಯಾಗಿದ್ದರು.ಉಷಾ ಅವರ 10 ಗ್ರಾಂ ತೂಕದ ಸರ ಹಾಗೂ ವರಲಕ್ಷ್ಮಿ ಅವರ 45 ಗ್ರಾಂ ತೂಕದ ಸರ ಕಳ್ಳರ ಪಾಲಾಗಿದೆ. ಗಿರಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಗಳ ಪತ್ತೆಗೆ ಪ್ರತ್ಯೇಕ ತಂಡ ರಚಿಸಿರುವುದಾಗಿ ಪೊಲೀಸರು ಮಾಹಿತಿ ನೀಡಿದ್ದಾರೆ

## ಬಿಪಿಎಲ್‌ನಿಂದ ಎಪಿಎಲ್‌ಗೆ ಪಡಿತರ ಚೀಟಿ ಪರಿವರ್ತನೆ ಶುರು




**ಬೆಂಗಳೂರು, ಸೆ.17–** ರಾಜ್ಯದಲ್ಲಿರುವ ಅನರ್ಹ ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್‌ಗಳನ್ನಾಗಿ ಪರಿವರ್ತಿಸುವ ಕುರಿತಂತೆ ಪ್ರಕ್ರಿಯೆಗಳನ್ನು ಆರಂಭಿಸಲಾಗಿದ್ದು, ಪರ ವಿರೋಧ ಚರ್ಚೆಗಳು ಮತ್ತೊಮ್ಮೆ ರಾಜಕೀಯ ಸಂಘರ್ಷಕ್ಕೆ ಕಾರಣವಾಗಿವೆ.ಸೂಚಿತ ಮಾನ ದಂಡಕ್ಕಿಂತಲೂ ಹೆಚ್ಚಿನ ಕಾರ್ಡ್‌ಗಳು ರಾಜ್ಯದಲ್ಲಿದ್ದು ಅವುಗಳನ್ನು ಪರಿಷ್ಕರಣೆ ಮಾಡುವಂತೆ ಕೇಂದ್ರ ಸರ್ಕಾರ ಮಾರ್ಗಸೂಚಿಯನ್ನು ರವಾನಿಸಿದೆ.ಕಳೆದ ಮೇ, ಜೂನ್‌ನಲ್ಲಿ ನಡೆಸಲಾದ ಸಮೀಕ್ಷೆಯ ಪ್ರಕಾರ ರಾಜ್ಯದಲ್ಲಿ 12,68,097 ಕಾರ್ಡ್‌ಗಳು ಅನರ್ಹರ ಕೈಯಲ್ಲಿವೆಣಾಟಿಜಜಜಿಟಿಜಜ ಎಂಬ ಅನುಮಾನ ವ್ಯಕ್ತವಾಗಿದೆ. ಇವುಗಳ ಪೈಕಿ ವಿವಿಧ ಕಂಪನಿಗಳಲ್ಲಿ ಪಾಲುದಾರರು, ನಿರ್ದೇಶಕರಾಗಿರುವ 19600 ಮಂದಿ ಬಿಪಿಎಲ್ ಕಾರ್ಡ್‌ಗಳನ್ನು ಹೊಂದಿದ್ದಾರೆ. 25 ಲಕ್ಷ ರೂ.ಗಳಿಗಿಂತಲೂ ಹೆಚ್ಚಿನ ಆದಾಯ ಹೊಂದಿರುವ 2684 ಮಂದಿ ಇದ್ದಾರೆ.

ಬಿಪಿಎಲ್ ವ್ಯಾಪ್ತಿಗೆ ಒಳಪಡಲು ವಾರ್ಷಿಕ 1.20 ಲಕ್ಷ ರೂ.ಗಿಂತಲೂ ಕಡಿಮೆ ಆದಾಯ ಹೊಂದಿರಬೇಕು. ಆದರೆ ನಿಗದಿತ ಮಿತಿ ದಾಟಿದ ಆದಾಯ ಹೊಂದಿರುವ 5,13,613 ಕುಟುಂಬಗಳು ಬಿಪಿಎಲ್ ಫಲಾನುಭವಿಗಳಾಗಿದ್ದಾರೆ. 7.5 ಎಕರೆಗಿಂತಲೂ ಹೆಚ್ಚಿನ ಭೂಮಿ ಹೊಂದಿರುವ 33,456 ಮಂದಿ, 6 ತಿಂಗಳಿನಿಂದಲೂ ಪಡಿತರ ಪಡೆಯದ 19,893 ಮಂದಿ, ನಾಲ್ಕು ಚಕ್ರಗಳ ವಾಹನ ಹೊಂದಿರುವ 119 ಮಂದಿ, 24 ಸಾವಿರ ಸರ್ಕಾರಿ ನೌಕರರು ಬಿಪಿಎಲ್ ಕಾರ್ಡ್ ಪಡೆದಿರುವುದು ಆಹಾರ ಇಲಾಖೆಯ ಪರಿಶೀಲನೆಯಲ್ಲಿ ಕಂಡು ಬಂದಿದೆ.ಈ ಕಾರ್ಡ್‌ಗಳನ್ನು ಎಪಿಎಲ್ ಅನ್ನಾಗಿ ಪರಿವರ್ತಿಸಲು ನಿರ್ಧಾರ ತೆಗೆದುಕೊಳ್ಳಲಾಗಿದೆ. ಕೇಂದ್ರ ಸರ್ಕಾರದ ಮಾಹಿತಿಯ ಪ್ರಕಾರ ರಾಜ್ಯದಲ್ಲಿ 1,10,06,964 ಕಾರ್ಡ್‌ಗಳಿವೆ. ಆದರೆ ರಾಜ್ಯಸರ್ಕಾರದ ಅಧಿಕೃತ ಮಾಹಿತಿಯ ಪ್ರಕಾರ 1,52,24,744 ಕಾರ್ಡ್‌ಗಳಿವೆ. ಕೇಂದ್ರ ಮತ್ತು ರಾಜ್ಯಸರ್ಕಾರಗಳ ದತ್ತಾಂಶಗಳ ನಡುವೆಯೇ 42,17,780 ಕಾರ್ಡ್‌ಗಳ ವ್ಯತ್ಯಾಸವಿದೆ. ಎಪಿಎಲ್ ವಲಯದಲ್ಲ ಕೇಂದ್ರದ ಅಂದಾಜಿಗಿಂತಲೂ ರಾಜ್ಯದಲ್ಲಿ 598 ಕಾರ್ಡ್‌ಗಳು ಕಡಿಮೆ ಇವೆ.ರಾಜ್ಯದಲ್ಲಿ 1,17,18,620 ಬಿಪಿಎಲ್ ಕಾರ್ಡ್‌ಗಳಿದ್ದು, ಕೇಂದ್ರದ ಮಾಹಿತಿ ಪ್ರಕಾರ 99,31,698 ಕಾರ್ಡ್‌ಗಳಿರುವುದಾಗಿ ತಿಳಿದು ಬಂದಿದೆ. ಇದರಲ್ಲಿಯೂ 17,86,922 ಕಾರ್ಡ್‌ಗಳ ವ್ಯತ್ಯಾಸ ಕಂಡು ಬರುತ್ತಿದೆ.

ಆಹಾರ ಭದ್ರತಾ ಕಾಯ್ದೆಯಡಿ ಕೇಂದ್ರ ಸರ್ಕಾರ ತಮಲ್ಲಿರುವ ದತ್ತಾಂಶದ ಪ್ರಕಾರವಷ್ಟೆ? ಆಹಾರ ಪೂರೈಸುವುದಾಗಿ ಸ್ಪಷ್ಟಪಡಿಸಿದೆ.ಹೆಚ್ಚುವರಿಯಾಗಿರುವ 42ಲಕ್ಷ ಕಾರ್ಡ್‌ದಾರರಿಗೆ ರಾಜ್ಯ ಸರ್ಕಾರವೇ ವೆಚ್ಚ ಭರಿಸಬೇಕಿದೆ. ಇರುವ ದತ್ತಾಂಶಗಳಲ್ಲೂ ಸಾಕಷ್ಟು ವ್ಯತ್ಯಾಸಗಳು ಕಂಡು ಬಂದಿರುವ ಹಿನ್ನೆಲೆಯಲ್ಲಿ ಪರಿಷ್ಕರಣೆ ಮಾಡಿ ಅನರ್ಹರನ್ನು ಪಟ್ಟಿಯಿಂದ ಕೈಬಿಡುವಂತೆ ಕೇಂದ್ರ ಸರ್ಕಾರ ಸೂಚನೆ ನೀಡಿದೆ.ವಿರೋಧ ಪಕ್ಷಗಳು ಸೇರಿದಂತೆ ಸಂಘಸಂಸ್ಥೆಗಳು ಭಾರೀ ವಿರೋಧ ವ್ಯಕ್ತ ಪಡಿಸಿದ್ದವು.

ಈ ಹಿನ್ನೆಲೆಯಲ್ಲಿ ಆರಂಭಿಸಿದ್ದ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಲಾಗಿತ್ತು. ಆದರೆ ಕೇಂದ್ರದ ಸೂಚನೆ ಆಧರಿಸಿ ಮತ್ತೆ ಪ್ರಕ್ರಿಯೆಗಳನ್ನು ಆರಂಭಿಸಲಾಗಿದೆ.ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್. ಮುನಿಯಪ್ಪ ಯಾವುದೇ ಬಿಪಿಎಲ್ ಕಾರ್ಡ್‌ಗಳನ್ನು ರದ್ದುಪಡಿಸುವುದಿಲ್ಲ. ಬದಲಾಗಿ ಎಪಿಎಲ್‌ಗೆ ಪರಿವರ್ತಿಸಲಾಗುತ್ತದೆ. ಮೂರ್ನಾಲ್ಕು ದಿನಗಳಲ್ಲಿ ಈ ಬಗ್ಗೆ ಸ್ಪಷ್ಟ ನಿರ್ಧಾರ ತೆಗೆದುಕೊಳ್ಳುವುದಾಗಿ ಹೇಳಿದ್ದಾರೆ.ಒಂದು ವೇಳೆ ಅರ್ಹರ ಬಿಪಿಎಲ್ ಕಾರ್ಡ್‌ಗಳು ರದ್ದುಗೊಂಡರೆ ಸಂಬಂಧಪಟ್ಟ ದಾಖಲಾತಿಗಳೊಂದಿಗೆ ಫಲಾನುಭವಿಗಳು ಅರ್ಜಿ ಸಲ್ಲಿಸಬಹುದು. ಅದನ್ನು ಪರಿಶೀಲಿಸಿ ಬಿಪಿಎಲ್‌ನ್ನು ಊರ್ಜಿತಗೊಳಿಸಲಾಗುವುದು ಎಂದು ಸಚಿವರು ಹೇಳಿದ್ದಾರೆ.ಆಹಾರ ಇಲಾಖೆ ಈಗಾಗಲೇ ಶಂಕಿತ ಬಿಪಿಎಲ್ ಕಾರ್ಡ್‌ಗಳಿಗೆ ಆಹಾರ ಧಾನ್ಯ ವಿತರಿಸದಂತೆ ಸೂಚನೆ ನೀಡಿದೆ. ಶಂಕಿತ ಅನರ್ಹ ಫಲಾನುಭವಿಗಳಿಗೆ ನೋಟಿಸ್ ಕೂಡ ನೀಡಲಾಗಿದ್ದು, ನ್ಯಾಯಬೆಲೆ ಅಂಗಡಿಗಳಿಗೂ ಮಾಹಿತಿ ಒದಗಿಸಲಾಗಿದೆ.

ಯುವ ಮಾರ್ಗ

ಗುರುವಾರ : 18-09-2025

# ತಾಲೂಕು ಆಡಳಿತ ವತಿಯಿಂದ ವಿಶ್ವಕರ್ಮ ದಿನಾಚರಣೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.17**–ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ತಾಲೂಕು ಆಡಳಿತ ವತಿಯಿಂದ ನಡೆದ ವಿಶ್ವಕರ್ಮ ಜಯಂತಿ ಕಾರ್ಯಕ್ರಮ ಅಂಗವಾಗಿ ಶಾಸಕ ಹಂಪಯ್ಯನಾಯಕ ದೇವಶಿಲ್ಪಿ ವಿಶ್ವಕರ್ಮರ ಭಾವಚಿತ್ರಕ್ಕ ಪೂಜೆ ಸಲ್ಲಿಸಿ ಮಾತನಾಡಿ ದೇವಶಿಲ್ಪಿ ವಿಶ್ವಕರ್ಮರು ದೇವತೆಗಳಿಗಾಗಿ ಸುಂದರ ಕಟ್ಟಡಗಳನ್ನು ಹಾಗೂ ಅರಮನೆಗಳನ್ನು ಕಟ್ಟಿಕೊಡುತ್ತಿದ್ದಾರು ಇಂದು ವಿಶ್ವಕರ್ಮ ಸಮುದಾಯದವರು ಜನರಿಗೆ ಅಗತ್ಯವಿರುವ ವಸ್ತುಗಳನ್ನು ಪಂಚಲೋಹಗಳನ್ನು ಬಳಸಿತಯಾರಿಸುತ್ತಾರೆ ವಿಶ್ವಕರ್ಮ ಸಮುದಾಯದವರು ತಮ್ಮ ಕುಲವೃತ್ತಿಯ ಜೊತೆಗೆ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡುವ ಅಗತ್ಯವಿದೆ ಎಂದು ತಿಳಿಸಿದರು.

ತಹಸೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿದರು.

ವಿಶ್ವಕರ್ಮ ಸಮುದಾಯದ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷರಾದ ಮೀನಾಕ್ಷಿ ಡಿ. ರಾಮಕೃಷ್ಣ,ಹಿರಿಯ ಪುರಸಭೆ ಸದಸ್ಯರಾದ ರಾಜಾ ಮಹೇಂದ್ರ ನಾಯಕ,ಹೆಚ್.ಬಿ.ಎಂ,ಬಾಷ, ಗ್ಯಾರಂಟಿ ಸಮಿತಿ ಅಧ್ಯಕ್ಷ.ಬಿ.ಕೆ.ಅಂಬರೇಶಪ್ಪ, ತಾ.ಆರೋಗ್ಯಧಿಕಾರಿ ಡಾ.ಶರಣಬಸವ,ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್,ಪುರಸಭೆ ಮುಖ್ಯಾಧಿಕಾರಿ ಪರಶುರಾಮ್ ದೇವಮಾನೆ,ಪಿ.ಐ, ಸೋಮಶೇಖರ ಎಸ್.ಕೆಂಚರೆಡ್ಡಿ, ರಾಜಾ ಸುಭಾಷಚಂದ್ರನಾಯಕ, ವಿಶ್ವಕರ್ಮ ಸಮುದಾಯದ ಶ್ರೀಶೈಲಪತ್ತಾರ, ರಮೇಶಪತ್ತಾರ್, ಷಣ್ಮುಖಚಾರ್ಯ, ಮೌನೇಶವಿಶ್ವಕರ್ಮ, ಮನೋಹರ್ ವಿಶ್ವಕರ್ಮ, ಸೇರಿದಂತೆ ಇನ್ನಿತರರು ಇದ್ದರು.

ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದರು.

## ಲಿಂಗರಾಜ ಅಪ್ಪ ಕಾಲೇಜು: ಶಿಕ್ಷಕರ, ಎಂಜಿನಿಯರ್‌ಗಳ ದಿನಾಚರಣೆ



**ಬೀದರ್:ಸೆ.17**–ನಗರದ ಹೊರವಲಯದ ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜಿನಲ್ಲಿ ಶಿಕ್ಷಕರ ಹಾಗೂ ಎಂಜಿನಿಯರ್‌ಗಳ ದಿನ ಆಚರಿಸಲಾಯಿತು.

ವಿದ್ಯಾರ್ಥಿಗಳು ವಿದ್ಯೆ ಹಾಗೂ ಸಂಸ್ಕಾರ ಕೊಟ್ಟ ಗುರುವನ್ನು ಜೀವನದಲ್ಲಿ ಸದಾ ಗೌರವಿಸಬೇಕು. ಅವರು ಹಾಕಿಕೊಟ್ಟ ಮಾರ್ಗದಲ್ಲಿ ಮುನ್ನಡೆಯಬೇಕು ಎಂದು ಕಾಲೇಜು ನಿರ್ದೇಶಕ ಶರಣಬಸಪ್ಪ ದೇಶಮುಖ ಹೇಳಿದರು.

ಮೇರಾ ಯುವ ಭಾರತ ಜಿಲ್ಲಾ ಯುವ ಅಧಿಕಾರಿ ಮಯೂರಕುಮಾರ ಗೋರಮೆ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಸ್ಪಷ್ಟ ಗುರಿ ಇಟ್ಟುಕೊಳ್ಳಬೇಕು. ಅದನ್ನು ತಲುಪಲು ಕಠಿಣ ಪರಿಶ್ರಮ ವಹಿಸಬೇಕು ಎಂದು ತಿಳಿಸಿದರು.

ಪ್ರಾಚಾರ್ಯೆ ಡಾ. ವಿನಿತಾ ಪಾಟೀಲ ಮಾತನಾಡಿ, ಲಿಂ. ಡಾ. ಶರಣಬಸವಪ್ಪ ಅಪ್ಪ ಅವರ ಆಶೀರ್ವಾದ, ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷೆ ಮಾತೆ ಡಾ. ದಾಕ್ಷಾಯಿಣಿ, ಕಾರ್ಯದರ್ಶಿ ಬಸವರಾಜ ದೇಶಮುಖ ಹಾಗೂ ಶರಣಬಸವೇಶ್ವರ ಸಂಸ್ಥಾನದ ಪೀಠಾಧಿಪತಿ ದೊಡ್ಡಪ್ಪ ಅಪ್ಪ ಅವರ ಮಾರ್ಗದರ್ಶನದಲ್ಲಿ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಪ್ರೇರಣಾತ್ಮಕವಾದ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ವಿದ್ಯಾರ್ಥಿಗಳು ಹೊಸ ಹೊಸ ತಂತ್ರಜ್ಞಾನಗಳನ್ನು ಅರಿಯಬೇಕು. ಅವುಗಳ ಸದ್ಬಳಕೆ ಮಾಡಿಕೊಳ್ಳಬೇಕು. ಈ ಮೂಲಕ ಜೀವನದಲ್ಲಿ ಸಾಧನೆಗೆ ಪ್ರಯತ್ನಿಸಬೇಕು ಎಂದು ತಿಳಿಸಿದರು.ವಿದ್ಯಾರ್ಥಿಗಳ ಪ್ರತಿಭೆಗೆ ವೇದಿಕೆ ಒದಗಿಸಲು ಪ್ರೊಜೆಕ್ಟ್ ಪ್ರದರ್ಶನ ಏರ್ಪಡಿಸಲಾಗಿತ್ತು. ಅತ್ಯುತ್ತಮ ಪ್ರೊಗಳಿಗೆ ಬಹುಮಾನ ವಿತರಿಸಲಾಯಿತು.

ಸರ್ಕಾರಿ ಪಾಲಿಟೆಕ್ನಿಕ್ ಉಪನ್ಯಾಸಕ ಮಹೇಶ ಶೇಗೆದಾರ್, ನಾಗರಾಜ ಶೆಟಕಾರ್, ಜಿ.ಎನ್.ಡಿ. ಕಾಲೇಜಿನ ಪ್ರಾಧ್ಯಾಪಕಿ ಡಾ. ಮಶರತ್ ಬೇಗಂ ನಿರ್ಣಾಯಕರಾಗಿದ್ದರು.ಅತ್ಯುತ್ತಮ ಸೇವೆ ಸಲ್ಲಿಸುತ್ತಿರುವ ಶಿಕ್ಷಕರಿಗೆ ಪ್ರಶಸ್ತಿ ನೀಡಿ ಪ್ರೋತ್ಸಾಹಿಸಲಾಯಿತು. ಎಲ್ಲ ಶಿಕ್ಷಕರನ್ನು ಗೌರವಿಸಲಾಯಿತು.

# ಅಧಿಕಾರಿಗಳು, ಸಿಬ್ಬಂದಿಗೆ ಸಮಾಜದ ಕಾಳಜಿ ಇರಲಿ: ನಿತೀಶ್ ಕೆ

ಯುವ ಮಾರ್ಗ ಸುದ್ದಿ



**ರಾಯಚೂರು,ಸೆ.17**–ಯಕ್ಲಾಸಪುರ ಹತ್ತಿರದ ನೂತನ ಜಿಲ್ಲಾಡಳಿತ ಭವನದಲ್ಲಿ ಸೆ.17ರಂದು, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಕಲ್ಯಾಣ ಕರ್ನಾಟಕ ಉತ್ಸವ ದಿನದ ಧ್ವಜಾರೋಹಣ ನೆರವೇರಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿಗಳು, 12ನೇ ಶತಮಾನದಲ್ಲಿ ನಡೆದ ಬಹುದೊಡ್ಡ ಕ್ರಾಂತಿಗೆ ಈ ಕಲ್ಯಾಣ ಕರ್ನಾಟಕ ಭಾಗವು ಸಾಕ್ಷಿಯಾಯಿತು. ಅಂದಿನಿಂದ ಈ ಭಾಗದಲ್ಲಿ ಸಾಮಾಜಿಕ ಪರಿವರ್ತನೆ ಆರಂಭವಾಯಿತು. ಕಲ್ಯಾಣದ ಶರಣರು ಬಯಸಿದ ಸಮಸಮಾಜ ನಿರ್ಮಾಣ ಮಾಡಲು ನಾವೆಲ್ಲರೂ ಸೇರಿ ಶ್ರಮಿಸೋಣ. ಈ ನಿಟ್ಟಿನಲ್ಲಿ ಕಲ್ಯಾಣ ಕರ್ನಾಟಕ ಭಾಗದ ಅಧಿಕಾರಿಗಳು ಮತ್ತು ಸಿಬ್ಬಂದಿಯ ಮೇಲೆಯು ಸಹ ಬಹುದೊಡ್ಡ ಜವಾಬ್ದಾರಿ ಇದ್ದು, ಸಾಮಾಜಿಕ ಕಾಳಜಿಯೊಂದಿಗೆ ಅಧಿಕಾರಿಗಳು ಮತ್ತು ಸಿಬ್ಬಂದಿ ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಿ ಜನತೆಗೆ ಸ್ಪಂದಿಸಬೇಕು ಎಂದು ಸಲಹೆ ಮಾಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ, ಸಹಾಯಕ ಆಯುಕ್ತರಾದ ಗಜಾನನ ಬಾಳೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

# ಜಾಂಭವ ಯುವ ಸೇನೆ ನೂತನ ತಾಲೂಕ ಪದಾಧಿಕಾರಿಗಳ ಆಯ್ಕೆ

ಯುವ ಮಾರ್ಗ ಸುದ್ದಿ



**ಲಿಂಗಸುಗೂರು,ಸೆ.17**– ನೂತನವಾಗಿ ಲಿಂಗಸುಗೂರು ತಾಲೂಕು ಜಾಂಭವ ಯುವ ಸೇನೆ ಸಂಘಟನೆಯ ಪದಾಧಿಕಾರಿಗಳನ್ನು ರಾಜ್ಯ ಅಧ್ಯಕ್ಷರಾದ ಡಾ.ಎಂ.ಎಸ್.ರಮೇಶ್.ಚಕ್ರವರ್ತಿ ಮತ್ತು ಜಿಲ್ಲಾ ಅಧ್ಯಕ್ಷರಾದ ಈರಣ್ಣ ಬುಲ್ಲೆಟ್ ಇವರ ಆದೇಶದ ಮೇರೆಗೆ ತಾಲೂಕು ಸಮಿತಿ ರಚನೆ ಮಾಡಲಾಯಿತು.

ಪ್ರವಾಸಿ ಮಂದಿರದಲ್ಲಿ ನೂತನ ಪದಾಧಿಕಾರಿಗಳ ಸಭೆಯನ್ನು ನಡೆಸಿ. ತಾಲೂಕು ಅಧ್ಯಕ್ಷರಾಗಿ ಶಶಿಕುಮಾರ್. ಉಪಾಧ್ಯಕ್ಷರಾಗಿ ಹನುಮಂತ, ಕಾರ್ಯದರ್ಶಿಯಾಗಿ ಸುರೇಶ, ಸಹ ಕಾರ್ಯ ದರ್ಶಿಯಾಗಿ ಹನುಮಪ್ಪ, ಪ್ರಧಾನ ಕಾರ್ಯದರ್ಶಿ ನಾಗರಾಜ್ ಇವರನ್ನು ನೇಮಕ ಮಾಡಿ ಆದೇಶ ಪ್ರತಿಯನ್ನು ನೀಡಲಾಯಿತು.

ಸಂಘಟನೆಯ ತತ್ವ ಸಿದ್ಧಾಂತಗಳಿಗೆ ಬದ್ಧರಾಗಿ ತಾಲೂಕಿನಲ್ಲಿ ಕಾರ್ಯಪ್ರವೃತ್ತರಾಗಿ ದಲಿತ ಸಮುದಾಯಗಳ ಸಮಸ್ಯೆಗಳನ್ನು ಪರಿಹರಿಸಲು ಸಂಘಟನೆಯು ಕೆಲಸ ಮಾಡಬೇಕು ಎಂದು ತಿಳಿಸಿದರು.

ನಂತರ ಮಾತನಾಡಿದ ಶಶಿಕುಮಾರ್ ಇವರು ತಾಲೂಕು ಸಮಿತಿಯ ಎಲ್ಲಾ ಪದಾಧಿಕಾರಿಗಳು ಸಂಘಟನೆಯ ತತ್ವ ಸಿದ್ಧಾಂತಗಳಿಗೆ ಬದ್ಧರಾಗಿ ತಾಲೂಕಿನ ವ್ಯಾಪ್ತಿಯ ದಲಿತರ ಕುಂದು ಕೊರತೆಗಳ ಬಗ್ಗೆ ಹಾಗೂ ಸಮಸ್ಯೆಗಳ ಕುರಿತು ಮತ್ತು ಸಮುದಾಯದ ಜನರನ್ನು ಜಾಗೃತಗೊಳಿಸುವ ಮೂಲಕ ಶಿಕ್ಷಣದ ಬಗ್ಗೆ ಸರ್ಕಾರದ ಸೌಲಭ್ಯಗಳ ಕುರಿತು ಅರಿವು ಮೂಡಿಸುವ ಕಾರ್ಯವನ್ನು ಸಂಘಟನೆಯ ಎಲ್ಲಾ ಪದಾಧಿಕಾರಿಗಳು ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಜಾಂಭವ ಯುವ ಸೇನೆ ಜಿಲ್ಲಾ ಗೌರವಾಧ್ಯಕ್ಷರಾದ ಈ ಕುಮಾರಸ್ವಾಮಿ, ಜಿಲ್ಲಾ ಅಧ್ಯಕ್ಷರಾದ ಈರಣ್ಣ ಬುಲ್ಲೆಟ್, ಉಪಾಧ್ಯಕ್ಷರಾದ ಆಂಜಿನೇಯ, ಪ್ರಧಾನ ಕಾರ್ಯದರ್ಶಿ ಉಮಾಪತಿ, ಹಿರಿಯ ದಲಿತ ಮುಖಂಡರಾದ ಹುಲುಗಪ್ಪ ಕೆಸರಟ್ಟಿ, ಜಾಂಭವ ಯುವ ಸೇನೆ ಸಂಘಟನೆಯ ನೂತನ ತಾಲೂಕು ಅಧ್ಯಕ್ಷರಾದ ಶಶಿಕುಮಾರ್, ಉಪಾಧ್ಯಕ್ಷರಾದ ಹನುಮಂತ,ಪ್ರಧಾನ ಕಾರ್ಯದರ್ಶಿ ಸುರೇಶ್, ಕಾರ್ಯದರ್ಶಿ ಹನುಮಪ್ಪ ಮುಖಂಡರಾದ ನಾಗರಾಜ, ಅಮರೇಶ, ಪ್ರಶಾಂತ ಕರಡಕಲ್ ಸಂಘಟನೆಯ ಮುಖಂಡರು ಇದ್ದರು.

# 371(ಜೆ)ಕಲಂ ಸದುಪಯೋಗ ಪಡೆಸಿಕೊಳ್ಳಿ : ಖಾಸಿಂ ಸಾಬ್

ಯುವ ಮಾರ್ಗ ಸುದ್ದಿ



**ಮಾನ್ವಿ,ಸೆ.17**–ಕಲ್ಯಾಣ ಕರ್ನಾಟಕದ ಜನರು 371 ಜೆ ಅಡಿಯಲ್ಲಿ ನೀಡಲಾಗಿರುವ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು. ಗುಣಮಟ್ಟದ ಶಿಕ್ಷಣವನ್ನು ಪಡೆದು ಸುಶಿಕ್ಷಿತರಾಗಬೇಕೆಂದು ಲೊಯೋಲ ಕಾಲೇಜಿನ ಉಪಪ್ರಾಚಾರ್ಯರಾದ ಖಾಸಿಂ ಸಾಬ್ ಅವರು ಹೇಳಿದರು.

ಪಟ್ಟಣದ ಲೊಯೋಲ ಶಿಕ್ಷಣ ಸಂಸ್ಥೆಗಳ ಸಹಯೋಗದಲ್ಲಿ ಆಚರಿಸಲಾದ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಹೈದರಾಬಾದ್ ಕರ್ನಾಟಕ ಭಾಗದ ಐತಿಹಾಸಿಕ ಹಿನ್ನಲೆ, ಭಾರತ ಸ್ವಾತಂತ್ರ್ಯ ನಂತರ ನಿಜಾಮ ಸರಕಾರ ತೆಗೆದುಕೊಂಡ ನಿರ್ಧಾರ, ಜನಸಾಮಾನ್ಯರ ಹೋರಾಟಗಳು, ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಕೈಗೊಂಡ ಪೊಲೀಸ್ ಕಾರ್ಯಾಚರಣೆ, ನಿಜಾಮನ ಕಪಿಮುಷ್ಠಿಯಿಂದ ಮುಕ್ತಿ ಪಡೆದು ಭಾರತ ಒಕ್ಕೂಟದಲ್ಲಿ ವಿಲೀನವಾದ ಹೈದರಾಬಾದ್ ಕರ್ನಾಟಕದ ಪ್ರಾಂತ್ಯಗಳು, ಕಲ್ಯಾಣ ಕರ್ನಾಟಕ ಎಂದು ಮರುನಾಮಕರಣ, ಪ್ರಸ್ತುತ ಕಲ್ಯಾಣ ಕರ್ನಾಟಕ ಜಿಲ್ಲೆಗಳ ಸ್ಥಿತಿಗತಿಗಳ ಕುರಿತು ಸವಿಸ್ತಾರವಾದ ಮಾಹಿತಿಯನ್ನು ನೀಡಿದರು.

ವೇದಿಕೆಯ ಮೇಲೆ ಲೊಯೋಲ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕರಾದ ಫಾ. ಮ್ಯಾಕ್ಸಿಂ ರಸ್ಕಿನ್ಹಾ, ಲೊಯೋಲ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರಾದ ಫಾ. ಸಿಪ್ರಿಯನ್ ಟೆಲ್ಲಿಸ್, ಲೊಯೋಲ ಶಾಲೆಯ ನಿರ್ದೇಶಕರು ಮತ್ತು ಕಾರ್ಯಕ್ರಮದ ಮುಖ್ಯ ಸಂಯೋಜಕರಾದ ಫಾ. ಸಿರಿಲ್ ರಾಜ್, ಝುವಿಯರ್ ಶಾಲೆಯ ಪ್ರಾಂಶುಪಾಲರಾದ ಫಾ. ವಿಲ್ಸನ್ ಬೆನ್ನಿಸ್, ಲೊಯೋಲ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಫಾ. ಪ್ರವೀಣ್ ಕುಮಾರ್, ಲೊಯೋಲ ಪದವಿ ಕಾಲೇಜಿನ ಪ್ರಾಂಶುಪಾಲರಾದ ಫಾ. ವಿನೋದ್ ಪೌಲ್ ಮತ್ತು ಲೊಯೋಲ ಶಾಲೆಯ ಮುಖ್ಯೋಪಾಧ್ಯಾಯಿನಿಯಾದ ಸಿಸ್ಟರ್ ಜ್ಯುಲಿಯೇಟ್ ಅವರು ಉಪಸ್ಥಿತರಾಗಿದ್ದರು.

ಲೊಯೋಲ ಪದವಿ ಕಾಲೇಜಿನ ವಿದ್ಯಾರ್ಥಿಗಳಿಂದ ಜಾನಪದ ನೃತ್ಯವನ್ನು ಏರ್ಪಡಿಸಲಾಗಿತ್ತು. ವಿದ್ಯಾರ್ಥಿಗಳಾದ ರೋಜ್ಲೀನ್ ನಿರೂಪಿಸಿದರೆ, ಹರ್ಷಿಯಾ ಸ್ವಾಗತಿಸಿ, ಸಂಜನಾ ವಂದಿಸಿದರು. ಕಾರ್ಯಕ್ರಮದಲ್ಲಿ ಲೊಯೋಲ ಶಿಕ್ಷಣ ಸಂಸ್ಥೆಗಳ ಎಲ್ಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಪ್ರಧಾನಿ ನರೇಂದ್ರ ಮೋದಿಯವರ 75 ನೇ ಜನ್ಮದಿನ ಆಚರಣೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.17**–ಪಟ್ಟಣದ ಸರ್ಕಾರಿ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಭಾರತೀಯ ಜನತಾ ಪಾರ್ಟಿ ಮಾನ್ವಿ ಮಂಡಲ ವತಿಯಿಂದ ಆಸ್ಪತ್ರೆಯಲ್ಲಿನ ರೊಗಿಗಳಿಗೆ ಹಾಲು ,ಹಣ್ಣು, ವಿತರಿಸುವುವ ಮೂಲಕ ದೇಶದ ಪ್ರಧಾನಿ ನರೇಂದ್ರ ಮೋದಿಯವರ 75 ನೇ ಜನ್ಮದಿನವನ್ನು ಆಚರಿಸಲಾಯಿತು.

ಭಾರತೀಯ ಜನತಾ ಪಾರ್ಟಿ ಮಾನ್ವಿ ಮಂಡಲ ಅಧ್ಯಕ್ಷರಾದ ವಿರೂಪಾಕ್ಷಗೌಡ ಭೋಗವತಿ ಮಾತನಾಡಿ ದೇಶದ ಅಭಿವೃದಿಗಾಗಿ ಶ್ರಮಿಸುತ್ತಿರುವ ದೇಶದ ಪ್ರಧಾನಿ ನರೇಂದ್ರ ಮೋದಿಯವರು ಭಾರತ ದೇಶವನ್ನು ಅಭಿವೃದ್ಧಿ ಪಥದಲ್ಲಿ ಮುನ್ನೆಡೆಸುತ್ತಿದ್ದಾರೆ ಎಂದು ತಿಳಿಸಿದರು.

ಬಿ.ಜೆ.ಪಿ. ಪಕ್ಷದ ನೂರಾರು ಕಾರ್ಯಕರ್ತರು ಸಸಿಗಳನ್ನು ನೆಡುವ ಮೂಲಕ ದೇಶದ ಪ್ರಧಾನಿ ನರೇಂದ್ರ ಮೋದಿಯವರ 75 ನೇ ಜನ್ಮದಿನವನ್ನು ಆಚರಿಸಿದರು.

ಶರಣಪ್ಪ ನಕ್ಕುಂದಿ, ಗುರುಸಿದ್ದಪ್ಪ ಕಣ್ಣೂರು, ಹನುಮೇಶನಾಯಕ್ ಜಿನೂರ್,ಉಮೇಶ ಸಜ್ಜನ್,ರುದ್ರಗೌಡ, ಶಿವಲಿಂಗಯ್ಯಸ್ವಾಮಿ, ನಾಗರಾಜ್ ನಾಯಕ ಜಲ್ಲಿ, ಅನುರಾಧ ಸೂಗಪ್ಪ ಗೌಡ, ಮಲ್ಲಮ್ಮ, ಕುಮಾರಸ್ವಾಮಿ ಮೇದಾ, ಜಿ,ಸುಧಕರ್, ಜಗದೀಶ್‌ಓತ್ತೂರ್, ಉದಯಸಾಹುಕರ್, ರಾಘವೇಂದ್ರ, ಖಾಜಾನಗೌಡರ್, ರವಿಕುಮಾರ್, ವಿಜಯಕುಮಾರ ಮೇಟಿ.ಸೇರಿದಂತೆ ಇನ್ನಿತರರು ಇದ್ದರು.

# ಪತ್ರಿಕಾ ಭವನದಲ್ಲಿ ಕಲ್ಯಾಣ ಕರ್ನಾಟಕ ದಿನಾಚರಣೆ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಸೆ.17**– ಪಟ್ಟಣದ ಪತ್ರಿಕಾ ಭವನದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಗುರುರಾಜ ಗೌಡೂರು ನೇತೃತ್ವದಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯ ಧ್ವಜಾರೋಹಣ ನೆರವೇರಿಸಲಾಯಿತು.

ಪತ್ರಕರ್ತರ ಸಂಘದ ಅಧ್ಯಕ್ಷ ಗುರುರಾಜ ಗೌಡೂರು ಮಾತನಾಡಿ,ನಿಜಾಮನ ಕಪಿಮುಷ್ಠಿಯಿಂದ ಹೈದಾಬಾದ್ ಕರ್ನಾಟಕವನ್ನು ವಿಮುಕ್ತಿಗೊಳಿಸುವಲ್ಲಿ ಪತ್ರಕರ್ತರ ಪಾತ್ರವೂ ಮಹತ್ವದ್ದಾಗಿದೆ. ದೇಶದ ಅಭಿವೃದ್ಧಿಯಲ್ಲಿ ಪತ್ರಕರ್ತರು ತಮ್ಮದೇ ಆದ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಅಮರಯ್ಯ ಘಂಟಿ, ಉಪಾಧ್ಯಕ್ಷ ಮಹ್ಮದ್ ಖಾಜಾಹುಸೇನ್, ಹಿರಿಯ ಪತ್ರಕರ್ತರಾದ ಎನ್.ಬಸವರಾಜ, ಲಕ್ಷ್ಮಣ ಬಾರಿಕೇರ್, ಶಿವರಾಜ ಕೆಂಭಾವಿ, ಅಮರೇಶ ಕಲ್ಲೂರು, ಅಮರೇಶ ಬಲ್ಲಟಗಿ, ರಾಘವೇಂದ್ರ ಭಜಂತಿ, ಹನುಮಂತ ಕನ್ನಾಳ,

ರಾಜೇಶ ಮಾಣಿಕ್, ಸಾದತಲಿ, ಮುಸ್ತಫಾ, ಪ್ರಮೋದ ಕನಕಗಿರಿ, ದನುಷ್ ಪೂಜಾರಿ ಸೇರಿ ಇತರರು ಇದರು.

# ಕಲ್ಯಾಣ ಕರ್ನಾಟಕಕ್ಕೆ 5 ಸಾವಿರ ಶಿಕ್ಷಕರ ನೇಮಕ: ಸಿಎಂ



**ಕಲಬುರಗಿ,ಸೆ.17**–ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಗಣನೀಯವಾಗಿ ಕುಸಿತ ಕಂಡಿರುವುದನ್ನು ಗಂಭೀರವಾಗಿ ಪರಿಗಣಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಖಾಲಿ ಇರುವ 5,267 ಶಿಕ್ಷಕರನ್ನು ನೇಮಕ ಮಾಡಲು ಸೂಚನೆ ನೀಡಲಾಗಿದೆ ಎಂದು ಪ್ರಕಟಿಸಿದ್ದಾರೆ.

ಕಲ್ಯಾಣ ಕರ್ನಾಟಕ ಭಾಗದ 16 ನೂತನ ತಾಲ್ಲೂಕುಗಳಲ್ಲಿ ಹೊಸದಾಗಿ 'ಪ್ರಜಾಸೌಧ' ಹೊಸ ತಾಲ್ಲೂಕು ಆಡಳಿತ ಕಟ್ಟಡಗಳನ್ನು ನಿರ್ಮಿಸಲಾಗುತ್ತಿದೆ ಎಂದು ಹೇಳಿದರು.

ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಕಲ್ಯಾಣ ಕರ್ನಾಟಕ ಭಾಗಕ್ಕೆ ಪ್ರತ್ಯೇಕ ಸಚಿವಾಲಯ ರಚಿಸಲು ಆದೇಶ ಹೊರಡಿಸಲಾಗಿದ್ದು, ಒಂದುವಾರದಲ್ಲಿ ಹುದ್ದೆ ಸಹಿತ ಅಧಿಸೂಚನೆ ಹೊರಡಿಸಲಾಗುವುದು ಎಂದು ತಿಳಿಸಿದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H